# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 152 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 29–12–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 152 | Title- Code: KARKAN 28269 | Chitradurga | Date: 29-12-2023 Friday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಗ್ರಾಹಕ ಜಾಗೃತನಾದರೆ ಮೋಸ, ವಂಚನೆ ತಪ್ಪಲಿದೆ: ಎಡಿಸಿ 2

ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರಿಗೆ ಭದ್ರತೆ, ಭಯ ಮುಕ್ತ ವಾತಾವರಣ ಅವಶ್ಯ 3

ಅಯ್ಯಪ್ಪಸ್ವಾಮಿ ದರ್ಶನ ಪಡೆಯಲು ಸೈಕಲ್ ಏರಿಹೊರಟ ಭಕ್ತ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ನಾವು ಆಡುವ ಮಾತುಗಳನ್ನು ಆಲಿಸದೆ, ನಮ್ಮ ಮಾತುಗಳನ್ನು ಗೌರವಿಸದೆ ಇರುವ ಸಂದರ್ಭದಲ್ಲಿ ನಾವು ಎಷ್ಟೇ ಮಾತನಾಡಿದರೂ, ಏನೇ ಹೇಳಿದರೂ ಯಾವುದೇ ಪ್ರಯೋಜನವಿರಲ್ಲ. ಸುಮ್ಮನೆ ವ್ಯರ್ಥ ಮಾತನಾಡಿ ನಮ್ಮನ್ನು ನಾವು ನಿರೂಪಿಸಿಕೊಳ್ಳಲು ಆಗದಿದ್ದ ಸಂದರ್ಭದಲ್ಲಿ ನಾವು ಮೌನಕ್ಕೆ ಶರಣಾಗಿ ಇದ್ದುಬಿಡುವುದೇ ಉತ್ತಮ.

» ಶುಭೋದಯ

## ಬಡತನ ನಿರ್ಮೂಲನೆಗೆ ಪಣ, ಜನಪರ ಯೋಜನೆ ಜಾರಿಗೊಳಿಸಿದ್ದು ಕಾಂಗ್ರೆಸ್: ಶಾಸಕ ರಘುಮೂರ್ತಿ

» ನಮ್ಮ ಜನ ವಾರ್ತೆ ಚಳ್ಳಕೆರೆ

ಗರೀಭಿ ಹಠವೋ ಮೂಲಕ ದೇಶದ ಬಡಜನರಿಗೆ ಅನ್ನ, ನೀರು, ಬಟ್ಟೆಯನ್ನು ಒದಗಿಸಿದ ಕೀರ್ತಿ ಕಾಂಗ್ರೆಸ್ ಪಕ್ಷದ್ದು ,ಕಾಂಗ್ರೆಸ್ ಪಕ್ಷದ ಮಾಜಿ ಪ್ರಧಾನಮಂತ್ರಿ ಜವಹರಲಾಲ್ ನೆಹರೂ, ಇಂದಿರಾಗಾಂಧಿಯವರು ದೇಶದ ಜನರಿಗೆ ರಕ್ಷಣೆ ಒದಗಿಸುವ ಜೊತೆಗೆ ಪ್ರತಿಯೊಬ್ಬರೂ ಸಮಾನತೆಯ ರೀತಿಯಲ್ಲಿ ಜೀವನ ನಿರ್ವಹಿಸುವ ಅವಕಾಶ ಮಾಡಿಕೊಟ್ಟವರು. ಅವರ ಚಿಂತನೆಗಳ ಫಲವಾಗಿ ಇಂದು ಕಾಂಗ್ರೆಸ್ ಪಕ್ಷ ವಿಶ್ವದಲ್ಲೇ ಶಕ್ತಿಯುತವಾಗಿ ಬೆಳೆದಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಚಳ್ಳಕೆರೆ ನಗರ್ ಕಾಂಗ್ರೆಸ್ ಪಕ್ಷದ ಕಾರ್ಯಾಲಯದದಲ್ಲಿ ಚಳ್ಳಕೆರೆ ಮತ್ತು ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಘಟಕ ಹಮ್ಮಿಕೊಂಡಿದ್ದ ಕಾಂಗ್ರೆಸ್ ಪಕ್ಷದ 138ನೇ ಸಂಸ್ಥಾಪನಾದಿನಾಚರಣೆಕಾರ್ಯಕ್ರಮದಲ್ಲಿ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಕಾಂಗ್ರೆಸ್ ಪಕ್ಷಕ್ಕೆ ತನ್ನದೇ ಆದ ಇತಿಹಾಸ ಇದೆ. ಕಾಂಗ್ರೆಸ್ ಪಕ್ಷ ಸದಾ ಬಡವರ ಪರವಾಗಿದೆ. ಎಲ್ಲಾ ಜಾತಿ ಜನಾಂಗದ ಏಳ್ಗೆ ಬಯಸಿ ಎಲ್ಲಾರನ್ನು ಒಟ್ಟಾಗಿ ಕೊಂಡೊಯ್ಯುವ ಕೆಲಸ ಮಾಡುತ್ತಿದೆ.

ಬಡವರ ಪರವಾಗಿ ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದ್ದು ಜನರ ಬದುಕು ಸುಧಾರಣೆಗೆ ಸಹಾಕರಿಯಾಗಿದೆ.

ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಹಲವಾರು ಜನಪರ ಯೋಜನೆಗಳ ಮೂಲಕ ಜನಸಾಮಾನ್ಯರ ಮನಸ್ಸನ್ನು ಗೆಲ್ಲುವಲ್ಲಿ ಯಶಸ್ವಿಯಾಗಿದ್ಧಾರೆ. ಮುಂಬರುವ ಲೋಕಸಭಾ ಚುನಾವಣೆಯಲ್ಲೂ ಕರ್ನಾಟಕದಲ್ಲಿ ಅತಿಹೆಚ್ಚಿನ ಸ್ಥಾನಗಳನ್ನು ಕಾಂಗ್ರೆಸ್ ಪಕ್ಷ ಪಡೆಯಲು ಪಕ್ಷದ ಕಾರ್ಯಕರ್ತರು ಮುಖಂಡರು ಇಂದೇ ಸಂಕಲ್ಪ ಮಾಡಬೇಕು ಎಂದರು.

ಚಳ್ಳಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಟಿ.ತಿಪ್ಪೇಸ್ವಾಮಿ, ಜಿಲ್ಲಾ ಪಂಚಾಯಿತಿ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ ಸದಸ್ಯರಾದ ಸುಮಭರಮಣ್ಣ, ಕವಿತಾಬೋರಯ್ಯ, ಮುಖಂಡರಾದ ಕಿರಣ್‌ಶಂಕರ್, ಟಿ.ಗಿರಿಯಪ್ಪ, ಆಂಜನೇಯ, ಎಸ್.ಎಚ್.ಸೈಯದ್, ಅನ್ವರ್ ಮಾಸ್ಟರ್, ಆರ್.ಪ್ರಸನ್ನಕುಮಾರ್, ನೇತಾಜಿ ಪ್ರಸನ್ನ, ಬಿ.ಫರೀದ್‌ಖಾನ್, ಶಿವಕುಮಾರ್, ರಾಜಣ್ಣ, ಸ್ವಾಮಿ, ಖಾದರ್ ಯರಬಾಲಪ್ಪ, ಸಿ.ಓಬಯ್ಯ, ಬಿ.ಎಂ.ಭಾಗ್ಯಮ್ಮ, ಸರಸ್ವರಮ್ಮ, ರಾಜಮ್ಮ, ಕವಿತಾ, ಭಾಗ್ಯಲಕ್ಷ್ಮಿ ಮಂಜುಳಾ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



> ದೇಶದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತನ್ನದೇ ಆದ ಇತಿಹಾಸ ಹೊಂದಿದೆ. ಕಾಂಗ್ರೆಸ್ ಪಕ್ಷದ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಗ್ರಾಮೀಣ ಜನರ ಬದುಕಿಗೆ ಭದ್ರತೆ ಒದಗಿಸಿದೆ. ರಾಜ್ಯ ಸರ್ಕಾರದ ಗ್ಯಾರೆಂಟಿ ಯೋಜನೆಗಳು ಬಡವರ ಪಾಲಿಗೆ ವರದಾನವಾಗಿದ್ದು ಲೋಕಸಭೆಯಲ್ಲಿ ನಮ್ಮ ಪಕ್ಷ ಅತಿ ಹೆಚ್ಚು ಸ್ಥಾನ ಗಳಿಸಲಿದೆ.
>
> » ಟಿ.ರಘುಮೂರ್ತಿ ಶಾಸಕ

### ಫಾಸ್ಟ್ ನ್ಯೂಸ್

#### ಕೋಟೆ ನಾಡಿಗೆ ಎಂಟ್ರಿಯಾದ ಕೋವಿಡ್ 5 ಜನಕ್ಕೆ ಪಾಸಿಟಿವ್

» ಚಿತ್ರದುರ್ಗ

ಕೋಟೆ ನಾಡಿನಲ್ಲಿ ಕೋವಿಡ್‌ಅಬ್ಬರ ಶುರುವಾಗಿದೆ. ಜಿಲ್ಲೆಯಲ್ಲಿ ಐವರಿಗೆ ಕೋವಿಡ್ ಸೋಂಕು ಪತ್ತೆಯಾಗಿದ್ದು ಇದರಿಂದ ಜಿಲ್ಲೆಯಲ್ಲಿ ಮತ್ತೆ ಕೋವಿಡ್ ಆತಂಕ ಪ್ರಾರಂಭವಾಗಿದೆ.ಜಿಲ್ಲೆಯಲ್ಲಿ ಓರ್ವ ಅಯ್ಯಪ್ಪ ಸ್ವಾಮಿ ಮಲಾಧಾರಿ ಸೇರಿದಂತೆ 5 ಮಂದಿಗೆ ಜೆಎನ್–1 ಸೋಂಕು ದೃಢಪಟ್ಟಿದೆ. ತಾಲ್ಲೂಕುವಾರು ಮಾಹಿತಿ ಈ ಕೆಳಗಿನಂತಿದೆ. ಚಿತ್ರದುರ್ಗ ತಾಲೂಕಿನಲ್ಲಿ 2, ಚಳ್ಳಕೆರೆ ತಾಲೂಕಿನಲ್ಲಿ 2, ಮೊಳಕಾಲ್ಮೂರು ತಾಲೂಕಿನಲ್ಲಿ 1 ಪ್ರಕರಣ ಪತ್ತೆಯಾಗಿದೆ.ಉಳಿದಂತೆ ಹಿರಿಯೂರು, ಹೊಳಲ್ಕೆರೆ ಹಾಗೂ ಹೊಸದುರ್ಗದಲ್ಲಿ ಯಾವುದೇ ಪ್ರಕರಣಗಳು ಪತ್ತೆಯಾಗಿಲ್ಲ ಎಂದು ಜಿಲ್ಲಾ ಆರೋಗ್ಯಾಧಿಕಾರಿ ರೇಣು ಪ್ರಸಾದ್ ಮಾಹಿತಿ ನೀಡಿದ್ದಾರೆ.

#### ಡಿ.30 ಮತ್ತು 31ರಂದು ವಾಣಿವಿಲಾಸ ಸಾಗರ ನೀರು ತಾತ್ಕಾಲಿಕ ಸ್ಥಗಿತ

» ಚಿತ್ರದುರ್ಗ

ಚಿತ್ರದುರ್ಗ ನಗರಕ್ಕೆ ಕುಡಿಯುವ ನೀರು ಸರಬರಾಜಾಗುವ ವಾಣಿವಿಲಾಸ ಸಾಗರ ನೀರು ಸರಬರಾಜು ಯೋಜನೆಯ ಮುಖ್ಯ ಕೊಳವೆ ಮಾರ್ಗ ಮಧ್ಯೆದಲ್ಲಿ ಸಿ.ಐ ಮತ್ತು ಎಂ.ಎಸ್ ಪೈಪ್‌ಲೈನ್‌ಗಳ ಮರು ಜೋಡಣೆ ಕೆಲಸ ಕೈಗೊಳ್ಳಬೇಕಾಗಿರುವುದರಿಂದ ವಾಣಿವಿಲಾಸ ಸಾಗರ ನೀರು ಸರಬರಾಜು ವ್ಯವಸ್ಥೆಯನ್ನು ತಾತ್ಕಾಲಿಕವಾಗಿ ಇದೇ ಡಿಸೆಂಬರ್ 30 ಮತ್ತು 31 ರಂದು ಸ್ಥಗಿತಗೊಳಿಸಲಾಗುತ್ತದೆ. ಸಾರ್ವಜನಿಕರು ತಮ್ಮ ತಮ್ಮ ಪ್ರದೇಶದಲ್ಲಿನ ಕೊಳವೆ ಬಾವಿಗಳ ನೀರನ್ನು ಮತ್ತು ಶುದ್ಧ ಕುಡಿಯುವ ನೀರನ್ನು ಉಪಯೋಗಿಸಲು ಕೋರಿದೆ. ನೀರನ್ನು ಮಿತವಾಗಿ ಬಳಸಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

#### ಹೊಳಲ್ಕೆರೆಯಲ್ಲಿ ಜ.02ಕ್ಕೆ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಜನತಾದರ್ಶನ

» ಚಿತ್ರದುರ್ಗ

ಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ನೇತೃತ್ವದಲ್ಲಿ ಜ. 02 ರಂದು ಬೆ. 10.30 ಕ್ಕೆ ಹೊಳಲ್ಕೆರೆಯ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಒಳಾಂಗಣ ಆಡಿಟೋರಿಯಂ (ಸಂವಿಧಾನ ಸೌಧ) ನಲ್ಲಿ ಜನತಾ ದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ.ಸಾರ್ವಜನಿಕರ ಕುಂದು ಕೊರತೆಗಳನ್ನು ಸ್ಥಳೀಯ ಮಟ್ಟದಲ್ಲಿ ನಿವಾರಿಸುವ ನಿಟ್ಟನಲ್ಲಿ ಮುಖ್ಯಮಂತ್ರಿಗಳ ಸೂಚನೆಯಂತೆ ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಪ್ರತಿ ತಿಂಗಳು ಜನತಾ ದರ್ಶನ ಏರ್ಪಡಿಸಲಾಗುತ್ತಿದ್ದು, ಅದರನ್ವಯ ಜನತಾ ದರ್ಶನ ಇದೇ ಜ. 02 ರಂದು ಬೆಳಿಗ್ಗೆ 10.30 ಕ್ಕೆ ಹೊಳಲ್ಕೆರೆಯ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಶ್ರೀ ಮಹರ್ಷಿ ವಾಲ್ಮೀಕಿ ಒಳಾಂಗಣ ಆಡಿಟೋರಿಯಂ (ಸಂವಿಧಾನ ಸೌಧ) ನಲ್ಲಿ ಏರ್ಪಡಿಸಲಾಗಿದೆ. ಜಿಲ್ಲಾಮಟ್ಟದ ಎಲ್ಲ ಅಧಿಕಾರಿಗಳು,ಜನಪ್ರತಿನಿಧಿಗಳು ಜನತಾ ದರ್ಶನದಲ್ಲಿ ಉಪಸ್ಥಿತರಿರುವರು. ಸಾರ್ವಜನಿಕರಿಂದ ಅರ್ಜಿಗಳನ್ನು ಪಡೆದು ಸ್ವೀಕೃತಿ ನೀಡುವಸಲುವಾಗಿಸಮರ್ಪಕರೀತಿಯಲ್ಲಿಕೌಂಟರ್‌ಗಳ ವ್ಯವಸ್ಥೆ ಮಾಡಲಾಗುವುದು. ಸಾರ್ವಜನಿಕರು ತಮ್ಮ ಕುಂದುಕೊರತೆ ಕುರಿತ ಅಹವಾಲು, ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

## ನ್ಯೂನತೆ ಸರಿಪಡಿಸಿಕೊಳ್ಳಲು ಸೂಚನೆ

### ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ದಿಢೀರ್ ಭೇಟಿ, ಪರಿಶೀಲನೆ

» ಚಿತ್ರದುರ್ಗ

ಪ್ರಸವಪೂರ್ವಮತ್ತುಗರ್ಭಪೂರ್ವ ಭ್ರೂಣಲಿಂಗ ಪತ್ತೆ ನಿಷೇಧ ಕಾಯ್ದೆ (ಪಿಸಿ & ಪಿಎನ್‌ಡಿಟಿ) ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಜಿಲ್ಲಾ ತಪಾಸಣಾ ಮತ್ತು ಪರಿಶೀಲನಾ ಸಮಿತಿಯು ಪಿಸಿ&ಪಿಎನ್‌ಡಿಟಿ ತಂಡದೊಂದಿಗೆ ಹಿರಿಯೂರು ನಗರದ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿತು, ಅಲ್ಲದೆ ಅಲ್ಲಿ ಕಂಡುಬಂದ ಕೆಲವು ನ್ಯೂನತೆಗಳನ್ನು ಸರಿಪಡಿಸಿಕೊಳ್ಳಲು ಸೂಚನೆ ನೀಡಿತು.

ಪಿಸಿ&ಪಿಎನ್‌ಡಿಟಿ ಕಾಯ್ದೆ ಅನುಷ್ಠಾನ ಸಂಬಂಧ ಜಿಲ್ಲಾ ತಪಾಸಣಾ ಮತ್ತು ಪರಿಶೀಲನಾ ಸಮಿತಿಯ ಅಧ್ಯಕ್ಷರಾದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಜಿ.ಪಿ.ರೇಣುಪ್ರಸಾದ್ ಹಾಗೂ ಸಮಿತಿಯ ಸದಸ್ಯರಾದ ಡಾ. ಸತ್ಯನಾರಾಯಣ ಅವರು ಹಿರಿಯೂರು ನಗರದ ಮುಖ್ಯರಸ್ತೆಯಲ್ಲಿರುವ ಬಾಲಾಜಿ ನರ್ಸಿಂಗ್ ಹೋಮ್ ಮತ್ತು ದಂತ ಚಿಕಿತ್ಸಾಲಯದ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಸೆಂಟರ್‌ಗೆ ಅನಿರೀಕ್ಷಿತವಾಗಿ ಭೇಟಿ ನೀಡಿ, ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಮಾಡಿರುವ ದಾಖಲಾತಿ, ರಿಜಿಸ್ಟರ್ (ಎಎನ್‌ಸಿ) ಸರಿಯಾಗಿ ನಿರ್ವಹಿಸಲು ಸೂಚಿಸಿದರು.

ಪಿಸಿ&ಪಿಎನ್‌ಡಿಟಿ ಕಾಯ್ದೆಯ ನಿಯಮದಂತೆ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಮಾಡುವ ಕೊಠಡಿಗೆ ಸಂಬಂಧಪಟ್ಟಂತೆ ಸೂಕ್ತ ಸ್ಥಳದಲ್ಲಿ ಗರ್ಭಿಣಿಯರಿಗೆ ಅನುಕೂಲಕರವಾಗುವ ಸ್ಥಳದಲ್ಲಿ ಬದಲಾಯಿಸಲು ಸೂಚಿಸಿದರು. ಅಲ್ಟ್ರಾಸೌಂಡ್ ಸ್ಕ್ಯಾನಿಂಗ್ ಮಾಡುವ ಕೊಠಡಿ ಒಳಗೆ–ಹೊರಗೆ ಯಾವುದೇ ಅಲ್ಟ್ರಾಸೌಂಡ್ ಸ್ಕ್ಯಾನಿಂಗ್‌ಗೆ ಸಂಬಂಧಿಸಿದ ಐಇಸಿ ಮಾಹಿತಿ ಮತ್ತು ಚಿಕಿತ್ಸಾ ದರಪಟ್ಟಿಯನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸುವುದು. ಎಂಟಿಪಿಗೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನುಇಟ್ಟುಕೊಳ್ಳಬೇಕು ಎಂದು ಸೂಚನೆ ನೀಡಿದರು.





**ದಾವಣಗೆರೆ ಕಸಬಾ ಹೋಬಳಿ ಕುಕ್ಕವಾಡ ಗ್ರಾಮದ ಸನಂ 0 ರಲ್ಲಿ 4–00 ಎಕರೆ ಸ್ಮಶಾನದ ಜಮೀನನ್ನು ಕುಕ್ಕವಾಡ ಗ್ರಾಮದ ಕೆಲವರು ಸ್ಥಳೀಯ ವಾಸಿಗಳು ಸುಮಾರು 20 ವರ್ಷದಿಂದ ಒತ್ತುವರಿ ಮಾಡಿಕೊಂಡಿದ್ದು ಪೋಲೀಸ್ ಇಲಾಖೆಯ ಸಹಯೋಗದೊಂದಿಗೆ ಇಂದು ಮಾನ್ಯ ತಹಶೀಲ್ದಾರ ರಾದ ಡಾ. ಅಶ್ವತ್ ರವರ ನೇತೃತ್ವದಲ್ಲಿ ತೆರವುಗೊಳಿಸಲಾಯಿತು.. ಈ ಸಂದರ್ಭದಲ್ಲಿ ಪ್ರೊಬೆಷನರಿ ತಹಶೀಲ್ದಾರ್ ಬೆಳ್ಳಿ ಪ್ರಕಾಶ್, ಕಂದಾಯ ನಿರೀಕ್ಷಕ ಎನ್ ಬಸವರಾಜಪ್ಪ, ಸರ್ವೆಯರ್ ಹರ್ಷದ್ ಅಲಿ, ಗ್ರಾಮ ಲೆಕ್ಕಾಧಿಕಾರಿ ಮಹಾಂತೇಶ್,ಪಿಡಿಒ ಲಕ್ಷ್ಮಿದೇವಿ ಹಾಜರಿದ್ದರು.**

### ಪ್ರಮುಖ ಸುದ್ದಿ

## ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸಂಸ್ಥಾಪನಾ ದಿನಾಚರಣೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಕಾಂಗ್ರೆಸ್ ಪಕ್ಷದ 138ನೇ ಸಂಸ್ಥಾಪನಾ ದಿನಾಚರಣೆ ಮಾಡಲಾಯಿತು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಂ.ಕೆ.ತಾಜ್‌ಪೀರ್ ಕಚೇರಿ ಮುಂದೆ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಸ್ವಾತಂತ್ರ್ಯ ಪೂರ್ವದಿಂದ ಇಂದಿನವರೆಗೂ ಕಾಂಗ್ರೆಸ್ ಪಕ್ಷ ದೇಶಕ್ಕೆ ಕೊಟ್ಟ ಕೊಡುಗೆ ಅಪಾರ. ಎಲ್ಲಾ ವಲಯಗಳಲ್ಲೂ ದೇಶದ ಕೀರ್ತಿ ಹೆಚ್ಚಿಸಲು ಕಾರಣವಾದ ಕಾಂಗ್ರೆಸ್ ಪಕ್ಷದ ಕ್ರಮ ಸ್ಮರಣೀಯ ಎಂದರು.

ತನ್ನದೇ ಆದ ಧ್ಯೇಯ, ಸಿದ್ಧಾಂತಗಳಿಗೆ ಬದ್ಧವಾದ ಪಕ್ಷವಾಗಿದೆ. ದೇಶಕ್ಕೆ ಅಹಿಂಸಾ ಮಾರ್ಗದಲ್ಲಿ ಹೋರಾಟವನ್ನು ನಡೆಸುವುದರ ಮೂಲಕ ಸ್ವಾತಂತ್ರ್ಯವನ್ನು ತಂದು ಕೊಟ್ಟಿದ್ದಾರೆ. ಶ್ರೇಷ್ಠವಾದ ಸಾಧನೆಯನ್ನು ಕಾಂಗ್ರೆಸ್ ಪಕ್ಷದಾಗಿದೆ. ತದನಂತರ 138 ವರ್ಷದಲ್ಲಿ ಸಾಧನೆಯನ್ನು ಮಾಡಿದೆ ಅಭೀವೃದ್ಧಿ ಯೋಜನೆಯನ್ನು ಕಾಂಗ್ರೆಸ್ ಪಕ್ಷದ ನೇತೃತ್ವದ ಸರ್ಕಾರಗಳಾಗಿವೆ. ಕೃಷಿ ಶಿಕ್ಷಣ, ಕೈಗಾರಿಕೆ ಕ್ಷೇತ್ರ ಅನೇಕ ಬಡವರ ರೈತರ ಪರವಾಗಿ ಅನೇಕ ಕಾರ್ಯಕ್ರಮಗಳನ್ನು ನೀಡಲಾಗಿದೆ. ಇದರಲ್ಲಿಪಂಚವಾರ್ಷಿಕಕಾರ್ಯಕ್ರಮಗಳು ಮುಖ್ಯವಾಗಿದೆ ಎಂದು ತಿಳಿಸಿದರು.




ಇಂತಹ ಸಮಯದಲ್ಲಿ ನಾವುಗಳು ಭಾಗವಹಿಸಿರುವುದು ಅತ್ಯಂತ್ಯ ಸಂತೋಷವಾಗಿದೆ. ಭಾಗ್ಯ ಇನ್ನೂ ಮುಂದಿನ ದಿನದಲ್ಲಿಯೂ ಸಹಾ ಕಾಂಗ್ರೆಸ್ ಪಕ್ಷದ ಯೋಜನೆ ಮತ್ತು ಸಾಧನೆಗಳನ್ನು ಜನರಿಗೆ ತಿಳಿಸುವ ಕಾರ್ಯವನ್ನು ಮಾಡಬೇಕಿದೆ ಎಂದು ಕರೆ ನೀಡಿದರು.

ಮಾಜಿ ಸಚಿವ ಎಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಕಾರ್ಯಾಧ್ಯಕ್ಷ ಹಾಲಸ್ವಾಮಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾ ನಂದಿನಿಗೌಡ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಬಿ.ಟಿ.ಜಗದೀಶ್, ಮುಖಂಡರಾದ ಲಕ್ಷ್ಮೀಕಾಂತ, ಅಂಜನಪ್ಪ, ಎನ.ಡಿ.ಕುಮಾರ್, ಮೋಹನ್ ಪೂಜಾರಿ, ಭೂತೇಶ್, ಮೂಡಲಗಿರಿಯಪ್ಪ, ಉಮೇಶ್, ಸೈಫುಲ್ಲಾ ಖಾನ್, ರಹಮತ್ತುವುಲ್ಲಾ, ಭಾಗ್ಯಮ್ಮ, ರತ್ನಮ್ಮ, ಕೋಮಲ, ಇಂದ್ರಿರಮ್ಮ, ಸಾಧಿಕ್, ತಿಪ್ಪೇಸ್ವಾಮಿ, ಪಾರ್ವತಮ್ಮ, ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಇಂದು ಚೌಡೇಶ್ವರಿ ದೇವಿ ಕಡೆ ಕಾರ್ತಿಕ

» **ಚಿತ್ರದುರ್ಗ**

ನಗರದ ದೊಡ್ಡಪೇಟೆಯಲ್ಲಿನ ಜೈನ್ ದೇವಾಲಯದ ಹಿಂಭಾಗದ ಜವಳೇರ ಬೀದಿಯಲ್ಲಿನ ಶ್ರೀ ಚೌಡೇಶ್ವರಿ ದೇವಸ್ಥಾನ ಅಭೀವೃದ್ಧಿ ಸಮಿತಿಯವತಿಯಿಂದ ಡಿ. 29ರಂದು ಚೌಡೇಶ್ವರಿ ಅಮ್ಮನವರ ಕಡೇ ಕಾರ್ತಿಕ ಮಹೋತ್ಸವವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ತಿಳಿಸಿದೆ. ಅಂದು ಸಂಜೆ 7–30 ಗಂಟೆಗೆ ಅಮ್ಮನವರಿಗೆ ದೀಪರಾಧನೆ, ಮಹಾ ಮಂಗಳಾರತಿ ಕಾರ್ಯಕ್ರಮ ನಡೆಯಲಿದೆ. ಕಾರ್ತಿಕ ಮಹೋತ್ಸವದಲ್ಲಿ ಭಾಗವಹಿಸುವ ಭಕ್ತಾಧಿಗಳು ತಮ್ಮ ಮನೆಯಿಂದಲೇ ಎಣ್ಣೆ ಮತ್ತು ಬತ್ತಿಯನ್ನು ತರಬೇಕೆಂದು ಸಮಿತಿಯವರು ಮನವಿ ಮಾಡಿದ್ದು ಈ ಕಾರ್ಯಕ್ರಮದಲ್ಲಿ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದೇವಿಯ ಕೃಪೆಗೆ ಪಾತ್ರರಾಗುವಂತೆ ಸಮಿತಿಯ ಪದಾಧಿಕಾರಿಗಳಾದ ವಿರೂಪಾಕ್ಷಪ್ಪ ಭಕ್ತಾದಿಗಳಲ್ಲಿ ವಿನಂತಿಸಿದ್ದಾರೆ.

### ರಾಜ್ಯ ಮಹಿಳಾ ಸಮ್ಮೇಳನ

» **ಚಿತ್ರದುರ್ಗ**

ದಾವಣಗೆರೆಯಲ್ಲಿ 2024 ಜನವರಿ 6 ಮತ್ತು 7 ರಂದು ಎ.ಐ.ಎಂ.ಎಸ್.ಎಸ್.ನ 7ನೇ ರಾಜ್ಯ ಮಹಿಳಾ ಸಮ್ಮೇಳನ ನಡೆಯಲಿದ್ದು, ಲೇಖಕಿ ಸಮಾಜಿಕ ಕಾರ್ಯಕರ್ತೆ ಶ್ರೀಮತಿ ರೂಪಾ ಹಾಸನ ಸಮಾವೇಶವನ್ನು ಉದ್ಘಾಟಿಸಲಿದ್ದಾರೆ.

ಜ.6ರ ಬೆಳಿಗ್ಗೆ 10 ಗಂಟೆಯಿಂದ ದಾವಣಗೆರೆಯ ಜಯದೇವ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಲಿದ್ದು ಇದನ್ನು ಕೆನರಾ ಬ್ಯಾಂಕ್ ಸ್ಟಾಫ್ ಫೇಡರೇಷನ್‌ನ ಮಾಜಿ ಅಧ್ಯಕ್ಷರಾದ ಎಂ.ಆರ್. ಹಿರೇಮಠ ಉದ್ಘಾಟಿಸಲಿದ್ದಾರೆ.

### ರೈತರಿಂದ ಕೃಷಿಭಾಗ್ಯ ಯೋಜನೆಗೆ ಅರ್ಜಿ

» **ದಾವಣಗೆರೆ**

ಕೃಷಿ ಇಲಾಖೆಯಿಂದ ಕೃಷಿ ಭಾಗ್ಯ ಯೋಜನೆಯಡಿ ದಾವಣಗೆರೆ ತಾಲ್ಲೂಕಿನ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಕೃಷಿ ಭಾಗ್ಯ ಯೋಜನೆಯಡಿ ಸಹಾಯಧನದಡಿ ಒದಗಿಸಲಾಗುವ ಘಟಕಗಳು: ಕ್ಷೇತ್ರ ಬದು ನಿರ್ಮಾಣ, ನೀರು ಸಂಗ್ರಹಣಾ ರಚನೆ (ಕೃಷಿ ಹೊಂಡ), ನೀರು ಇಂಗದಂತೆ ತಡೆಯಲು ಪಾಲಿಥೀನ್ ಹೊದಿಕೆ, ಕೃಷಿ ಹೊಂಡದ ಸುತ್ತಲೂ ತಂತಿ ಬೇಲಿ, ಹೊಂಡದಿಂದ ನೀರು ಎತ್ತಲು ಡೀಸೆಲ್ ಅಥವಾ ಸೋಲಾರ್ ಪಂಪ್‌ಸೆಟ್, ನೀರನ್ನು ಬೆಳೆಗೆ ಹಾಯಿಸಲು ಹನಿ, ತುಂತುರು ನೀರಾವರಿ ಪರಿಕರಗಳ ವಿತರಣೆ ಮಾಡಲಾಗುತ್ತದೆ. ರೈತರ ಒಟ್ಟು ಸಾಗುವಳಿ ಕ್ಷೇತ್ರದ ಒಂದು ಸರ್ವೆ ನಂಬರ್ ನಲ್ಲಿ ಕನಿಷ್ಠ 1 ಎಕರೆ ಇರಬೇಕು, ಇಲ್ಲವಾದಲ್ಲಿ ರೈತರ 1 ಎಕರೆ ಸಾಗುವಳಿ ಕ್ಷೇತ್ರವು ಒಂದಕ್ಕಿಂತ ಹೆಚ್ಚು ಸರ್ವೆ ನಂಬರ್ ನಲ್ಲಿ ಒಂದೇ ಪ್ರದೇಶದಲ್ಲಿ ಇರುಬೇಕು. ಇದು ಕನಿಷ್ಠ ಐದು ಎಕರೆ ಪ್ರದೇಶದಿಂದ ನೀರು ಶೇಖರಣೆಯಾಗುವಂತಿರಬೇಕು. ಈಗಾಗಲೇ ಈ ಯೋಜನೆ, ಇತರೆ ಯೋಜನೆಯಡಿ ಕೃಷಿ ಹೊಂಡ ಫಲಾನುಭವಿಯಾಗಿರುವ ರೈತರು ಈ ಯೋಜನೆಗೆ ಅರ್ಹತೆ ಹೊಂದಿರುವುದಿಲ್ಲ. ಫಲಾನುಭವಿಯು ಒಂದೇ ಇಲಾಖೆಯಿಂದ ಹಾಗೂ ಒಂದೇ ಯೋಜನೆಯಿಂದ ಸಹಾಯಧನವನ್ನು ಪಡೆಯುವುದನ್ನು ಖಾತ್ರಿ ಪಡಿಸಲು ಯೋಜನೆಯನ್ನು ಅನುಷ್ಠಾನಗೊಳಿಸುತ್ತಿರುವ ಇತರೆ ಇಲಾಖೆಗಳಿಂದ ದೃಢೀಕರಣ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಲು ಸಹಾಯಕ ಕೃಷಿ ನಿರ್ದೇಶಕ ಶ್ರೀಧರಮೂರ್ತಿ ಡಿ.ಎಂ ತಿಳಿಸಿದ್ದಾರೆ.

### ತೆಂಗು ಬೆಳೆಗಾರರ ನೆರವಿಗೆ ಧಾವಿಸಿದ ಕೇಂದ್ರ ಸರ್ಕಾರ

» **ನವದೆಹಲಿ**

ಮುಂಬರುವ ಸಾರ್ವತ್ರಿಕ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ದಕ್ಷಿಣ ಭಾರತದ ತೆಂಗು ಬೆಳೆಗಾರರ ನೆರವಿಗೆ ಧಾವಿಸಿದ ಕೇಂದ್ರ ಸರ್ಕಾರ, 2024 ರ ಹಂಗಾಮಿಗೆ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆಯನ್ನು ಹೆಚ್ಚಿಸಿದೆ. ಕೇರಳ ಮತ್ತು ತಮಿಳುನಾಡು ಮಿಲ್ಲಿಂಗ್ ಕೊಬ್ಬ ರಿಯ ಪ್ರಮುಖ ಉತ್ಪಾದಕ ರಾಜ್ಯಗಳಾಗಿವೆ. ಆದರೆ ಉಂಡೆ ಕೊಬ್ಬರಿ ಯನ್ನು ಕರ್ನಾಟಕದಲ್ಲಿ ಪ್ರಧಾನವಾಗಿ ಉತ್ಪಾದಿಸಲಾಗುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು ಕೊಬ್ಬರಿಯ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಲು ಅನುಮೋದನೆ ನೀಡಿದೆ.ಮಿಲ್ಲಿಂಗ್ ಕೊಬ್ಬರಿಗೆ ಎಂಎಸ್‌ಪಿ ಯನ್ನು ಶೇ. 2.7 ರಷ್ಟು ಹೆಚ್ಚಳ ಮಾಡಿದ್ದು, ಉಂಡೆ ಕೊಬ್ಬರಿಗೆ ಶೇ. 2 ರಷ್ಟು ಹೆಚ್ಚಳ ಮಾಡಲಾಗಿದೆ. ಅಂದರೆ ಮಿಲ್ಲಿಂಗ್ ಕೊಬ್ಬರಿಯ ಕನಿಷ್ಠ ಬೆಂಬಲ ಬೆಲೆಯನ್ನು ಕ್ವಿಂಟಾಲ್‌ಗೆ 300 ರೂ. ಹಾಗೂ ಉಂಡೆ ಕೊಬ್ಬರಿಯ 'ಎಂಎಸ್‌ಪಿ'ಯನ್ನು ಕ್ವಿಂಟಾಲ್‌ಗೆ 250 ರೂ. ಏರಿಕೆ ಮಾಡಲಾಗಿದೆ. ಇದರೊಂದಿಗೆ 2024ನೇ ಋತುವಿಗೆ ಮಿಲ್ಲಿಂಗ್ ಕೊಬ್ಬರಿಯ ಕನಿಷ್ಠ ಬೆಲೆಯು ಕ್ವಿಂಟಾಲ್‌ಗೆ 11,160 ರೂ.ಗೆ ಹೆಚ್ಚಳಗೊಂಡಿದೆ. ಇದೇ ವೇಳೆ, ಉತ್ತಮ ಗುಣಮಟ್ಟದ ಉಂಡೆ ಕೊಬ್ಬರಿ ಬೆಲೆ 12,000 ರೂ.ಗೆ ಏರಿಕೆಯಾಗಿದೆ.ಕೃಷಿ ವೆಚ್ಚಗಳು ಮತ್ತು ಬೆಲೆಗಳ ಆಯೋಗದ (ಸಿಎಸಿಪಿ) ಶಿಫಾರಸುಗಳು ಹಾಗೂ ಅಧಿಕ ತೆಂಗು ಬೆಳೆಯುವ ರಾಜ್ಯಗಳ ಅಭಿಪ್ರಾಯಗಳನ್ನು ಆಧರಿಸಿ ಈ ಏರಿಕೆ ಮಾಡಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಕೇಂದ್ರ ಸರ್ಕಾರ ಕೊಬ್ಬರಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಿದ್ದಕ್ಕೆ ಮಾಜಿ ಪ್ರಧಾನಿ, ಜೆಡಿಎಸ್ ವರಿಷ್ಠ ಎಚ್ ಡಿ ದೇವೇಗೌಡ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದ ಹೇಳಿದ್ದಾರೆ.

ರಾಷ್ಟ್ರೀಯ ಗ್ರಾಹಕರ ದಿನಾಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಗ್ರಾಹಕ ಜಾಗೃತನಾದರೆ ಮೋಸ, ವಂಚನೆ ತಪ್ಪಲಿದೆ

» **ಚಿತ್ರದುರ್ಗ**

ಗ್ರಾಹಕರು ಜಾಗೃತರಾದರೆ ಮೋಸ, ವಂಚನಗಳಿಗೆ ಒಳಗಾಗುವುದು ತಪ್ಪಲಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಗ್ರಾಹಕರು ಜಾಗೃತರಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನಾಶಾಸ್ತ್ರ ಇಲಾಖೆ ಹಾಗೂ ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.

ಅರಿವಿನ ಕೊರತೆ, ಆಸೆಗಳಿಗೆ ಬಲಿಯಾಗಿ ಗ್ರಾಹಕರು ತಮಗೆ ಗೊತ್ತೋ, ಗೊತ್ತಿಲ್ಲದೆಯೋ ಮೋಸಕ್ಕೆ ಒಳಗಾಗುತ್ತಿದ್ದಾರೆ. ಹಾಗಾಗಿ ಪ್ರತಿಯೊಬ್ಬ ಗ್ರಾಹಕರು ಜಾಗೃತರಾಗಬೇಕಿದೆ ಎಂದು ತಿಳಿಸಿದ ಅವರು, ಪ್ರಸ್ತುತ ದಿನಗಳಲ್ಲಿ ಆನ್‌ಲೈನ್ ವಂಚನೆಗೆ ಒಳಗಾಗುತ್ತಿರುವುದನ್ನು ಕಾಣುತ್ತಿದ್ದೇವೆ. ಪ್ರತಿಯೊಂದು ವಸ್ತುವಿನ ಹಿಂದೆ ನಮ್ಮ ದುಡಿಮೆಯ ಶ್ರಮದ ಫಲವಿರುತ್ತದೆ. ಹಾಗಾಗಿ ಅನಾವಶ್ಯಕವಾಗಿ ಅದನ್ನು ವ್ಯರ್ಥ ಮಾಡಲು ಬಿಡಬಾರದು ಎಂದರು.

ಮಾರುಕಟ್ಟೆಗಳಲ್ಲಿ ರೈತರು ತಮ್ಮ ಉತ್ಪನ್ನಗಳಲ್ಲಿ ತೂಕ ಮತ್ತು ಅಳತೆಯಲ್ಲಿ ಮೋಸಕ್ಕೆ ಒಳಗಾಗುವ ಸಾಧ್ಯತೆ ಇರುತ್ತದೆ. ಹಾಗಾಗಿ ಆಗಿಂದಾಗ್ಗೆ ಕಾನೂನು ಮಾಪನಾ ಶಾಸ್ತ್ರ ಇಲಾಖೆ ಸೇರಿದಂತೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು



ಪದೇ ಪದೇ ದಾಳಿ ನಡೆಸಿ ಪರಿಶೀಲನೆ ನಡೆಸುವುದು, ಅರಿವು ಮೂಡಿಸುವ ಕೆಲಸ ಮಾಡಬೇಕು. ತೂಕ ಮತ್ತು ಅಳತೆಯಲ್ಲಿ ಮೋಸ ಮಾಡಿದವರ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು. ರೈತರು ಕೂಡ ತಮ್ಮ ಬೆಳೆಗಳ ತೂಕ ಸರಿಯಾಗಿ ಮಾಡಲಾಗುತ್ತಿದೆಯೇ ಎಂಬುದನ್ನು ಗಮನಿಸಬೇಕು, ಮೋಸ ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಗ್ರಾಹಕರು ತಾವು ಖರೀದಿ ಮಾಡುವ ವಸ್ತುವಿನ ಮೌಲ್ಯ ಮತ್ತು ಅದರ ಮಹತ್ವ ತಿಳಿದುಕೊಳ್ಳಬೇಕು. ಆನ್‌ಲೈನ್ ವಹಿವಾಟುಗಳಲ್ಲಿ ಸಾಕಷ್ಟು ವಂಚಿಸುವ ಪ್ರಸಂಗಳು ಕಂಡುಬರುತ್ತಿವೆ. ಇವುಗಳಿಗೆ ಯಾರೂ ಒಳಗಾಗಬಾರದು ಎಂದು ಕಿವಿಮಾತು ಹೇಳಿದ ಅವರು, ಮೋಸಕ್ಕೆ ಒಳಗಾದ ಗ್ರಾಹಕರ ಹಿತರಕ್ಷಣೆಗಾಗಿ ಪ್ರತಿ ಜಿಲ್ಲೆಯಲ್ಲಿಯೂ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಇದ್ದು, ತಮ್ಮ ಮನವಿ ಸಲ್ಲಿಸುವಮೂಲಕನ್ಯಾಯೋಚಿತಪರಿಹಾರ ಕಂಡುಕೊಳ್ಳಬಹುದು ಎಂದು ತಿಳಿಸಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷೆ ಹೆಚ್.ಎನ್.ಮೀನಾ ಮಾತನಾಡಿ, ಯಾವುದೇ ಒಂದು ವಸ್ತುವನ್ನು ನಾವು ಖರೀದಿ ಮಾಡಿದಾಗ ನಾವು ಗ್ರಾಹಕರು ಆಗುತ್ತೇವೆ. ಆ ವಸ್ತುವಿನ ಸರಿಯಾದ ಬಿಲ್‌ನ್ನು ತೆಗೆದುಕೊಂಡಾಗ ಶಾಶ್ವಾತವಾಗಿ ಗ್ರಾಹಕರಾಗುತ್ತೇವೆ. ಅಗತ್ಯ ದಾಖಲೆಗಳನ್ನು ಇಟ್ಟುಕೊಂಡಿದ್ದರೆ ಮೋಸ, ವಂಚನೆಯಾದಾಗ ಪರಿಹಾರ ಪಡೆಯಬಹುದು. ಪ್ರತಿ ಜಿಲ್ಲೆಯಲ್ಲಿಯೂ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವಿದ್ದು, ಇಲ್ಲಿ ರೂ.1 ರಿಂದ 50 ಲಕ್ಷದವರೆಗೆ ಪರಿಹಾರ ಪಡೆಯಬಹುದು. ರಾಜ್ಯ ಆಯೋಗದಿಂದ ರೂ.50 ಲಕ್ಷದಿಂದ ರೂ.2 ಕೋಟಿವರೆಗೂ ಪಡೆಯಬಹುದು. ರಾಷ್ಟ್ರೀಯ ಆಯೋಗದಲ್ಲಿ ರೂ.2 ಕೋಟಿಯಿಂದ 10 ಕೋಟಿವರೆಗೂ ಮೌಲ್ಯದ ವ್ಯವಹಾರಗಳಿಗೆ ಪರಿಹಾರ ಪಡೆಯಲು ಅವಕಾಶವಿದೆ ಎಂದರು.

ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಮಾತನಾಡಿ, ಗ್ರಾಹಕರು ವಂಚನೆಗೆ ಒಳಗಾದ ಸಂದರ್ಭದಲ್ಲಿ ಅವರಿಗೆ ನ್ಯಾಯ ದೊರಕಿಸಿಕೊಡಲು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ರಚನೆ ಮಾಡಿ, ಗ್ರಾಹಕರ ಹಿತರಕ್ಷಣೆ ಮಾಡುವ ಕೆಲಸ ಮಾಡಲಾಗುತ್ತಿದೆ. ಆದರೆ ಮಾಹಿತಿ ಹಾಗೂ ಜಾಗೃತಿಯ ಕೊರತೆಯಿಂದ ಬಹಳಷ್ಟು ಜನರು ಈ ಆಯೋಗದ ಸದ್ಬಳಕೆ ಮಾಡಿಕೊಳ್ಳುತ್ತಿಲ್ಲ ಎಂದರು.

ಗ್ರಾಹಕರು ಯಾವುದೇ ವಸ್ತು ಖರೀದಿಸಿದರೂ ಕಡ್ಡಾಯವಾಗಿ ರಸೀದಿ ಪಡೆಯಬೇಕು. ನೀವುಗಳು ಏನಾದರೂ ಮೋಸ ಹೋಗಿದ್ದರೆ ಈ ರಸೀದಿಯು ಉಪಯೋಗಕ್ಕೆ ಬರಲಿದೆ. ಒಂದು ವೇಳೆ ಏನಾದರೂ ಮೋಸಕ್ಕೆ ಒಳಗಾಗಿದ್ದರೆ, ಮೋಸದ ವಿರುದ್ಧ ಗ್ರಾಹಕರ ವ್ಯಾಜ್ಯಗಳ ಆಯೋಗಕ್ಕೆ ಮೊರೆಹೋದರೆ ನ್ಯಾಯ ಸಿಗಲಿದೆ ಎಂದು ತಿಳಿಸಿದ ಅವರು, ಗ್ರಾಹಕರು ಜಾಗೃತರಾದಷ್ಟು ವ್ಯಾಪಾರಸ್ಥರು ಮಾಡುವ ಮೋಸ, ವಂಚನೆ ಕಡಿಮೆಯಾಗಲಿದೆ. ಪ್ರತಿಯೊಬ್ಬರಿಗೂ ಈ ಕುರಿತು ಜಾಗೃತಿ ಮೂಡಿಸಿದರೆ ವಂಚನೆ ರಹಿತ ಸಮಾಜ ನಿರ್ಮಾಣವಾಗಲಿದೆ ಎಂದು ಅಭಿಪ್ರಾಯಪಟ್ಟರು.

ವಕೀಲ ಬಿ.ಕೆ.ರಹಮತ್‌ವುಲ್ಲಾ ಅವರು ಇ–ಕಾಮರ್ಸ್ ಮತ್ತು ಡಿಜಿಟಲ್ ವ್ಯಾಪಾರದ ಯುಗದಲ್ಲಿ ಗ್ರಾಹಕರ ರಕ್ಷಣೆ ಕುರಿತುಉಪನ್ಯಾಸನೀಡಿ,ಪ್ರತಿಯೊಬ್ಬರಿಗೂ ಅನ್ನ, ಬಟ್ಟೆ, ವಸತಿ ಕಡ್ಡಾಯವಾಗಿ ಬೇಕು. ನ್ಯಾಯಬೆಲೆ ಅಂಗಡಿಗಳಲ್ಲಿ ಪಡೆಯುವ ಪಡಿತರದಲ್ಲಿ ತೂಕ ಮತ್ತು ಅಳತೆಯಲ್ಲಿ ಮೋಸವಾದರೆ ಸಂಬಂಧಪಟ್ಟ ಇಲಾಖೆಯವರ ಗಮನಕ್ಕೆ ತಂದು ನ್ಯಾಯ ಪಡೆದುಕೊಳ್ಳಬಹುದು. ವಸ್ತುವನ್ನು ಖರೀದಿಸುವ ಮೊದಲು ಗ್ರಾಹಕರು ಅದರ ಗುಣಮಟ್ಟ ಪರಿಶೀಲಿಸಬೇಕು. ಗ್ರಾಹಕರಿಗೆ ಮೋಸ ಆದಲ್ಲಿ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಿಂದ ಪರಿಹಾರ ಪಡೆಯಬಹುದು. ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಕೇವಲ ಮೂರು ತಿಂಗಳಲ್ಲಿಯೇ ಪರಿಹಾರ ಸಿಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯೆ ಬಿ.ಹೆಚ್.ಯಶೋಧ, ಆಹಾರ ನಾಗರಿಕ ಸರಬರಾಜು ಇಲಾಖೆ ಜಂಟಿ ನಿರ್ದೇಶಕ ಕೆ.ಪಿ.ಮಧುಸೂಧನ್, ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ಕಾನೂನು ಮಾಪನಾ ಶಾಸ್ತ್ರ ಇಲಾಖೆಯ ಹಿರಿಯ ಪರಿವೀಕ್ಷಕ ರಾಘುನಾಯ್ಕ್, ನವೀನ್, ಜಿಲ್ಲಾ ಗ್ರಾಹಕರ ಮಾಹಿತಿ ಕೇಂದ್ರದ ಜಿಲ್ಲಾ ಸಂಯೋಜಕ ತಮಟಕಲ್ಲು ಬಿ.ಹನುಮಂತಪ್ಪ ಇದ್ದರು.

# ಶಿವನಂದ ಪಾಟೀಲರನ್ನು ಸಚಿವಸ್ಥಾನದಿಂದ ವಜಾಮಾಡುವಂತೆ ರೈತ ಸಂಘ ಒತ್ತಾಯ

» **ಚಳ್ಳಕೆರೆ**

ಸಚಿವ ಸಂಪುಟದ ಸಚಿವರು ರೈತರ ಬಗ್ಗೆ ಅವಹೇಳನಕಾರಿಯಾಗಿ ಕೀಳಾಗಿ ವರ್ತಿಸುವ ಹುಚ್ಚರಂತೆ ವರ್ತಿಸುವ ಮಂತ್ರಿಗಳಿಗೆ ಬುದ್ಧಿ ಹೇಳದೆ ಹೋದರೆ ಇಂತಹ ಮನಗೇಡಿಗಳನ್ನು ಸಚಿವ ಸಂಪುಟದಿಂದ ವಜಾಮಾಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘದ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಆಗ್ರಹಿಸಿದರು. ಸಚಿವ ಸಂಪುಟ ಸಚಿವರನ್ನು ನಿಮಾನ್ಸ್ ಆಸ್ಪತ್ರೆಗೆ ಪರೀಕ್ಷೆ ಕಳುಹಿಸಬೇಕೆಂದರು.

ಬರಪರಿಹಾರವನ್ನು 1 ಹೆಕ್ಟರ್‌ಗೆ 2000 ಘೋಷಿಸಿ ರೈತ ಕುಲವನ್ನೇ ಅವಮಾನ ಮಾಡಿದ್ದೀರಿ, ನೀವುಗಳು ಸಂಕೋಚಿತ ಮನಸ್ಸಿನಿಂದ ರೈತರನ್ನು ಹೀಯಾಳಿಸುವಂತೆ ಪರಿಹಾರ ಘೋಷಣೆ ಮಾಡಿದ್ದು ರೈತ ಕುಲಕ್ಕೆ ಭಾರಿ ಅವಮಾನ ಮಾಡಿರುವುದನ್ನು ಖಂಡಿಸುತ್ತಿದ್ದೇವೆ ಎಂದು ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಹೇಳಿದ್ದಾರೆ.

ಚಳ್ಳಕೆರೆ ನಗರದ ಕರ್ನಾಟಕ ರಾಜ್ಯ ರೈತ ಸಂಘ ತಾಲ್ಲೂಕು ಕಛೇರಿ ಮುಂಭಾಗದಲ್ಲಿ ಆಗಮಿಸಿ ತಹಶೀಲ್ದಾರ್ ರೆಹಮಾನ್ ಪಾಷ ಅವರಿಗೆ ಮನವಿ ಸಲ್ಲಿಸಿದರು. ನಂತರ ಮಾತನಾಡಿದ ಅವರು ಬರಗಾಲದಿಂದ ತತ್ತರಿಸಿರುವ ರೈತರಿಗೆ ಹೆಕ್ಟರ್‌ಗೆ 25,000 ಕೊಡಬೇಕೆಂದು ಆಗ್ರಹಿಸಿದರು. ಕೇಂದ್ರ ಮತ್ತು ರಾಜ್ಯ ತಂಡಗಳು ಬಂದು ಬೆಳೆ ಸಮೀಕ್ಷೆ ಮಾಡಿ 3–4 ತಿಂಗಳುಗಳು ಕಳೆದರೂ ಬೆಳೆವಿಮೆ, ಬೆಳೆ ಪರಿಹಾರ ನೀಡದೆ ವಿನಾಕಾರಣ ಇಲ್ಲ–ಸಲ್ಲದ ನೆಪಹೇಳಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಲೋಕಸಭೆ ಗೆಲ್ಲಲು ಚುನಾವಣಾ ರಾಜಕೀಯ ಮಾಡುತ್ತ ರೈತರಿಗೆ



ಕಿರುಕುಳ ಕೊಡುತ್ತಿದ್ದಾರೆ. ರಾಜ್ಯ ರೈತರ ಮೇಲೆ ಕೇಂದ್ರ ಸರ್ಕಾರ ಹಗೆತನ ಸಾಗಿಸುತ್ತ ಕೇಂದ್ರದ ನೆರವು ನೀಡದೆ ರೈತರಿಗೆ ಕಿರುಕುಳ ನೀಡುತ್ತಿದೆ ಎಂದು ಆರೋಪಿಸಿದರು.ತಿಮ್ಮಪ್ಪಯ್ಯನಹಳ್ಳಿ ವೀರೇಶ್ ಮಾತನಾಡಿ ಕರ್ನಾಟಕ ರಾಜ್ಯ ಸರ್ಕಾರವು ರೈತರ ಬಂಡಿದಾರಿ, ಕಾಲುದಾರಿ, ರೂಢಿಗತ ದಾರಿ, ನಕಾಶೆ ದಾರಿಗಳಲ್ಲಿ ಓಡಾಡಲು ತೊಂದರೆಯಾಗುತ್ತಿರುವುದನ್ನು ತಕ್ಷಣವೇ ತಹಶೀಲ್ದಾರ್ ದಾರಿ ಬಿಡಿಸಿಕೊಡಬೇಕೆಂದು ಆದೇಶಿಸಿದ್ದರು ತಹಶೀಲ್ದಾರ್‌ರವರು ಗಮನವಹಿಸುತ್ತಿಲ್ಲ. ಸಮಸ್ಯೆಗಳು ಹಾಗೆ ಉಳಿದಿವೆ ಎಂದು ಬೇಸರ ವ್ಯಕ್ತಪಡಿಸಿದರು.

ಚಳ್ಳಕೆರೆ  ಮೊಳಕಾಲ್ಮೂರು ಕ್ಷೇತ್ರದ ಶಾಸಕರುಗಳು ಜನಸಂಪರ್ಕ ಸಭೆಗಳಲ್ಲಿ ಜನರ ಸಮಸ್ಯೆ ರೈತರ ಸಮಸ್ಯೆ ಬಂದಲ್ಲಿ ಕಛೇರಿ ಬಂದ್ ಮಾಡಿಯಾದರೂ ಸರಿ ಸಮಸ್ಯೆಗಳನ್ನು ಬಗೆಹರಿಸಿ ಎಂದು ಹೇಳಿದರೂ ಸಹ ಸಮಸ್ಯೆ ಬಗೆಹರಿಸುವಲ್ಲಿ ತಹಶೀಲ್ದಾರ್ ವಿಫಲರಾಗಿದ್ದಾರೆ ಎಂದು ಹೇಳಿದರು. ಜಿಲ್ಲಾಢಳಿತ ಮತ್ತು ಕ್ಷೇತ್ರ ಜನಪ್ರತಿನಿಧಿಗಳ ಸೂಚನೆಗೂ ಚಳ್ಳಕೆರೆ ತಾಲ್ಲೂಕು ತಹಶೀಲ್ದಾರ್ ಬೆಲೆ ಕೊಡದೆ ಸುಳ್ಳು ಮಾಹಿತಿಯನ್ನು ಮೇಲಾಧಿಕಾರಿಗಳಿಗೆ ತಿಳಿಸುತ್ತಾ ರೈತರ ವಿರೋಧಿ ಕೆಲಸ ಮಾಡುತ್ತಾ ತಾಲ್ಲೂಕಿನಲ್ಲಿ ನಡೆಯುತ್ತಿರುವ ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ಬಾರಿ ಕಾಳಜಿವಹಿಸಿದ್ದಾರೆ. ರೈತರ ತಮ್ಮ ಕೆಲಸಗಳ ಬಗ್ಗೆ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಉದಾಸೀನ ಮಾಡುವ ಅಧಿಕಾರಿಗಳ ಬಗ್ಗೆ ದೂರು ನೀಡಿದರೆ ದೂರನ್ನು ಕಸದ ತೊಟ್ಟಿಗೆ ಹಾಕುತ್ತಾರೆ ಎಂದು ದೂರಿದರು.

ಈ ಸಂದರ್ಭದಲ್ಲಿ ಉಪಸ್ಥಿತರಾದ ಬಾಗೇನಾಳ್ ಕೊಟ್ರಬಸಪ್ಪ, ಡಿ.ಚಂದ್ರಶೇಖರ್ ನಾಯ್ಕ, ಶ್ರೀಮತಿ ಶರಣಮ್ಮ, ಮಲ್ಲಸಮುದ್ರ ಗಂಗಾಧರ, ಬಿ.ವಿ.ತಿಪ್ಪೇಸ್ವಾಮಿ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಮೂಲೆಮನೆ ತಿಪ್ಪೇಸ್ವಾಮಿ, ಚಂದ್ರಣ್ಣ, ರಾಜಣ್ಣ, ಮೀಟಿ ನಾಯ್ಕ, ರಾಮಾನಾಯ್ಕ, ಓಬನಾಯ್ಕ, ಕಪಿಲೆತಿಪ್ಪೇಸ್ವಾಮಿ, ಓ.ಟಿ. ತಿಪ್ಪೇಸ್ವಾಮಿ, ಕಲ್ಲೇನಹಳ್ಳಿ ಕುಮಾರ್, ತಿಮ್ಮಪ್ಪಯ್ಯನಹಳ್ಳಿ ವೀರೇಶ್, ಇದ್ದರು.

# ಕಾಂಗ್ರೆಸ್ ರೈತರಿಗಾಗಿ ಕೆಲಸ ಮಾಡುತ್ತಿದೆ: ಮಲ್ಲೇಶ್

» **ನಾಯಕನಹಟ್ಟಿ**



ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದ ಜನತೆಗೆ ಉತ್ತಮ ಆಡಳಿತ ನೀಡುತ್ತಿದ್ದಾರೆ ಎಂದು ಕೆಪಿಸಿಸಿ ರಾಜ್ಯ ಸಂಚಾಲಕ ಪರಿಶಿಷ್ಟ ಜಾತಿ ವಿಭಾಗದ ವಕೀಲರು ಹಿರೇಹಳ್ಳಿ ಮಲ್ಲೇಶ್ ಹೇಳಿದರು.ನಾಯಕನಹಟ್ಟಿ ಸಮೀಪದ ತಳಕು ಹೋಬಳಿಯ ಹಿರೇಹಳ್ಳಿ ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯರವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿಗಳಿಇಂದ ಜೀವನ ನೆಮ್ಮದಿಯಿಂದ ನಡೆಸುತ್ತಿದ್ದಾರೆ.ಕಾಂಗ್ರೆಸ್ ಪಕ್ಷ ಬಡವರ, ಮತ್ತು ರೈತರಿಗಾಗಿ ಹೃದಯದಿಂದ ಕೆಲಸ ಮಾಡುತ್ತಿದೆ. ಕಾಂಗ್ರೆಸ್ ಪಕ್ಷವು ಹಳ್ಳಿಗಳು, ಬಡಕಾರ್ಮಿಕರು, ರೈತರಿಗಾಗಿ ಮಾಡುವ ಕೆಲಸಗಳ ಬಗ್ಗೆ ಯೋಚಿಸುತ್ತಿದೆ ಎಂದರು.ಕಳೆದ 75 ವರ್ಷಗಳಲ್ಲಿ ಭಾರತವನ್ನು ಕಟ್ಟಿದ್ದು ಕಾಂಗ್ರೆಸ್ ಪಕ್ಷ. ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಇತಿಹಾಸ ಕಾಂಗ್ರೆಸ್‌ಗೆ ಇದೆ. ಇದಾದ ಮೇಲೆ ದೇಶದ ಚುಕ್ಕಾಣಿ ಹಿಡಿದ ಜವಹರಲಾಲ್ ನೆಹರು ಸೇರಿದಂತೆ ಅನೇಕರು ಅರ್ಥ ಪೂರ್ಣ ಕೆಲಸಗಳನ್ನು ಮಾಡುವ ಮೂಲಕ ಭಾರತವನ್ನು ದೊಡ್ಡ ಆರ್ಥಿಕ ಶಕ್ತಿಯಾಗಿ ಬೆಳೆಸಿದರು.ದೇಶದಲ್ಲಿರುವ ಅಣೆಕಟ್ಟುಗಳಲ್ಲಿ 95% ರಷ್ಟು ನಿರ್ಮಾಣವಾಗಿದ್ದು ಕಾಂಗ್ರೆಸ್ ಆಡಳಿತದಲ್ಲಿ ಹಾಗೆಯೇ ಐ.ಐ.ಎಂ, ಐ.ಐ.ಟಿ, ಏಮ್ಸ್, ಕ್ಷೀರಕ್ರಾಂತಿ, ಕೃಷಿಕ್ರಾಂತಿ, ಡಿಜಿಟಲ್ ಕ್ರಾಂತಿ, ಇವೆಲ್ಲವನ್ನು ಮಾಡಿದ್ದು ನಮ್ಮ ಪಕ್ಷ ಎಂದರು.ದೇಶದಲ್ಲಿ ಬಡವರ ಸಬಲೀಕರಣ ಆಗಬೇಕೆಂಬ ಕನಸಿನೊಂದಿಗೆ ಆಹಾರ ಭದ್ರತೆ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆಗಳನ್ನು ಜಾರಿಗೆ ತಂದ ಕೀರ್ತಿ ಕಾಂಗ್ರೆಸ್‌ನದೆ ಆಗಿದೆ.ಜೊತೆಗೆ ದೇಶದ ಆರ್ಥಿಕ ಉದಾರಿಕರಣವನ್ನು ಸಾಧಿಸಿದ ಶ್ರೇಯಸ್ಸು ಪಿ.ವಿ.ನರಸಿಂಹರಾವ್ ಮತ್ತು ಮನಮೋಹನ್ ಸಿಂಗ್ ಅವರಿಗೆ ಸಲ್ಲುತ್ತದೆ.ಕೇವಲ ನೂರು ದಿನಗಳಲ್ಲಿ ಸ್ವಿಸ್ ಬ್ಯಾಂಕ್‌ನಲ್ಲಿರುವ ಕಪ್ಪು ಹಣವನ್ನೆಲ್ಲ ತಂದು ಪ್ರತಿಯೊಬ್ಬರ ಖಾತೆಗೂ 15ಲಕ್ಷ ಹಾಕುತ್ತೇವೆ. ಎಂದು ಪ್ರಧಾನಿ ನರೇಂದ್ರ ಮೋದಿಯವರು ಹೇಳಿದ್ದರು. ಈಗ ಅವರಿಗೆ ಮರೆತು ಹೋಗಿರಬೇಕೆಂದು ಟೀಕಿಸಿದರು. ಬುದ್ಧ, ಬಸವಣ್ಣ, ಅಂಬೇಡ್ಕರ್, ನಾರಾಯಣ ಗುರುಗಳು ಮತ್ತು ಕುವೆಂಪು ಅವರ ಸಿದ್ದಾಂತಗಳೆ ಕಾಂಗ್ರೆಸ್ ಪಕ್ಷದ ಸಿದ್ದಾಂತಗಳಾಗಿವೆ ಎಂದರು.

**ಪ್ರಮುಖ ಸುದ್ದಿ**

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸಂಸ್ಥಾಪನಾ ದಿನಾಚರಣೆ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಕಾಂಗ್ರೆಸ್ ಪಕ್ಷದ 138ನೇ ಸಂಸ್ಥಾಪನಾ ದಿನಾಚರಣೆ ಮಾಡಲಾಯಿತು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಂ.ಕೆ.ತಾಜ್‌ಪೀರ್ ಕಚೇರಿ ಮುಂದೆ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಸ್ವಾತಂತ್ರ್ಯ ಪೂರ್ವದಿಂದ ಇಂದಿನವರೆಗೂ ಕಾಂಗ್ರೆಸ್ ಪಕ್ಷ ದೇಶಕ್ಕೆ ಕೊಟ್ಟ ಕೊಡುಗೆ ಅಪಾರ. ಎಲ್ಲಾ ವಲಯಗಳಲ್ಲೂ ದೇಶದ ಕೀರ್ತಿ ಹೆಚ್ಚಿಸಲು ಕಾರಣವಾದ ಕಾಂಗ್ರೆಸ್ ಪಕ್ಷದ ಕ್ರಮ ಸ್ಮರಣೀಯ ಎಂದರು.

ತನ್ನದೇ ಆದ ಧ್ಯೇಯ, ಸಿದ್ಧಾಂತಗಳಿಗೆ ಬದ್ಧವಾದ ಪಕ್ಷವಾಗಿದೆ. ದೇಶಕ್ಕೆ ಅಹಿಂಸಾ ಮಾರ್ಗದಲ್ಲಿ ಹೋರಾಟವನ್ನು ನಡೆಸುವುದರ ಮೂಲಕ ಸ್ವಾತಂತ್ರ್ಯವನ್ನು ತಂದು ಕೊಟ್ಟಿದ್ದಾರೆ. ಶ್ರೇಷ್ಠವಾದ ಸಾಧನೆಯನ್ನು ಕಾಂಗ್ರೆಸ್ ಪಕ್ಷದಾಗಿದೆ. ತದ ನಂತರ 138 ವರ್ಷದಲ್ಲಿ ಸಾಧನೆಯನ್ನು ಮಾಡಿದೆ ಅಭೀವೃದ್ಧಿ ಯೋಜನೆಯನ್ನು




ಕಾಂಗ್ರೆಸ್ ಪಕ್ಷದ ನೇತೃತ್ವದ ಸರ್ಕಾರಗಳಾಗಿವೆ. ಕೃಷಿ ಶಿಕ್ಷಣ, ಕೈಗಾರಿಕೆ ಕ್ಷೇತ್ರ ಅನೇಕ ಬಡವರ ರೈತರ ಪರವಾಗಿ ಅನೇಕ ಕಾರ್ಯಕ್ರಮಗಳನ್ನು ನೀಡಲಾಗಿದೆ. ಇದರಲ್ಲಿಪಂಚವಾರ್ಷಿಕಕಾರ್ಯಕ್ರಮಗಳು ಮುಖ್ಯವಾಗಿದೆ ಎಂದು ತಿಳಿಸಿದರು.

ಇಂತಹ ಸಮಯದಲ್ಲಿ ನಾವುಗಳು ಭಾಗವಹಿಸಿರುವುದು ಅತ್ಯಂತ್ಯ ಸಂತೋಷವಾಗಿದೆ. ಭಾಗ್ಯ ಇನ್ನೂ ಮುಂದಿನ ದಿನದಲ್ಲಿಯೂ ಸಹಾ ಕಾಂಗ್ರೆಸ್ ಪಕ್ಷದ ಯೋಜನೆ ಮತ್ತು ಸಾಧನೆಗಳನ್ನು ಜನರಿಗೆ ತಿಳಿಸುವ ಕಾರ್ಯವನ್ನು ಮಾಡಬೇಕಿದೆ ಎಂದು ಕರೆ ನೀಡಿದರು.

ಮಾಜಿ ಸಚಿವ ಎಚ್.ಆಂಜನೇಯ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಕಾರ್ಯಾಧ್ಯಕ್ಷ ಹಾಲಸ್ವಾಮಿ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾ ನಂದಿನಿಗೌಡ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್, ಬಿ.ಟಿ.ಜಗದೀಶ್, ಮುಖಂಡರಾದ ಲಕ್ಷ್ಮೀಕಾಂತ, ಅಂಜನಪ್ಪ, ಎನ.ಡಿ.ಕುಮಾರ್, ಮೋಹನ್ ಪೂಜಾರಿ, ಭೂತೇಶ್, ಮೂಡಲಗಿರಿಯಪ್ಪ, ಉಮೇಶ್, ಸೈಫುಲ್ಲಾ ಖಾನ್, ರಹಮತ್ತುವುಲ್ಲಾ, ಭಾಗ್ಯಮ್ಮ, ರತ್ನಮ್ಮ, ಕೋಮಲ, ಇಂದ್ರಿರಮ್ಮ, ಸಾಧಿಕ್, ತಿಪ್ಪೇಸ್ವಾಮಿ, ಪಾರ್ವತಮ್ಮ, ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಅಜ್ಜಯ್ಯನಗುಡಿ ರಸ್ತೆಯ ಕೆರೆಹಿಂಭಾಗದಲ್ಲಿ ಅಕ್ರಮ ಗಾಂಜಾ ಮಾರಾಟ ಇಬ್ಬರು ಪೊಲೀಸ್ ವಶ


» ಚಳ್ಳಕೆರೆ

ನಗರದ ಹೊರವಲಯಗಳಲ್ಲಿ ಕಳೆದ ಕೆಲವು ದಿನಗಳಿಂದ ಅಕ್ರಮ ಗಾಂಜಾ ಮಾರಾಟ ಹೆಚ್ಚಾಗುತ್ತಿದ್ದು, ಪೊಲೀಸರ ಕಟ್ಟೆಚ್ಚರಿಕೆ ನಡುವೆಯೂ ಸಹ ಈ ದಂಧೆ ಎಗ್ಗಿಲ್ಲದೆ ನಡೆಯುತ್ತಿದೆ. ಬುಧವಾರವಷ್ಟೇ ವೀರದಿಮ್ಮನಹಳ್ಳಿ ಕ್ರಾಸ್ ಬಳಿ ಅಕ್ರಮ ಗಾಂಜಾ ಕೇಸ್ ವರದಿಯಾದ ಬೆನ್ನಲ್ಲೆ ಗುರುವಾರ ಅಜ್ಜಯ್ಯಗುಡಿ ರಸ್ತೆಯ ಕೆರೆ ಹಿಂಭಾಗದಲ್ಲಿ ತುರುವನೂರು ಹೋಬಳಿಯ ದೊಡ್ಡಗಟ್ಟ ಗ್ರಾಮದ ಪಾಪಯ್ಯ(58), ರಾಮದುರ್ಗ ಗ್ರಾಮದ ಆರ್.ಬಿ.ಸಣ್ಣಬೋರಯ್ಯ(65) ಇರುಗಳು ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದು, ಇವರನ್ನು ವಶಕ್ಕೆ ಪಡೆದು 18 ಸಾವಿರ ಮೌಲ್ಯದ 530ಗ್ರಾಂ ಒಣ ಗಾಂಜಾವನ್ನು ವಶಪಡಿಸಿಕೊಳ್ಳಲಾಗಿದೆ. ಪಿಎಸ್ಐ ಕೆ.ಸತೀಶ್‌ನಾಯ್ಕ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಸಾಕ್ಷಿದಾರರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಒಣಗಾಂಜಾ ಮತ್ತು ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ. ಠಾಣಾಧಿಕಾರಿ ವೆಂಕಟೇಶ್ ಪ್ರಕರಣ ದಾಖಲಿಸಿದ್ಧಾರೆ.

### ನಾರಾಯಣಗೌಡ ಬಿಡುಗಡೆಗೊಳಿಸದೇ ಇದ್ದಲ್ಲಿ ಹೊರಾಟ ತೀವ್ರ: ವೆಂಕಟೇಶ್ ಎಚ್ಚರಿಕೆ

» ಚಳ್ಳಕೆರೆ

ಬೆಂಗಳೂರಿನಲ್ಲಿ ಆಂಗ್ಲ ಫಲಕಗಳ ಮೇಲೆ ಮಸಿಬಳಿಯುವ ಮೂಲಕ ಕನ್ನಡ ಭಾಷೆಯ ಬೆಳವಣಿಗೆಗೆ ಹೋರಾಟ ನಡೆಸಿದ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ನಾರಾಯಣಗೌಡರವರನ್ನು ಬಂಧಿಸಿ ಜೈಲಿಗೆ ಕಳಿಸಲಾಗಿದೆ.



ಕೂಡಲೇ ಅವರನ್ನು ಬಿಡುಗಡೆ ಮಾಡಬೇಕೆಂದು ಕರ್ನಾಟಕ ರಕ್ಷಣಾವೇದಿಕೆ ತಾಲ್ಲೂಕು ಅಧ್ಯಕ್ಷ ಟಿ.ಜೆ. ವೆಂಕಟೇಶ್ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಕಳೆದ ಹಲವಾರು ದಶಕಗಳಿಂದ ಕನ್ನಡಪರ ಹೋರಾಟಗಳ ಮುಂಚೂಣಿ ನಾಯಕರಾಗಿ ನಾರಾಯಣಗೌಡ ಕಾರ್ಯನಿರ್ವಹಿಸುತ್ತಿದ್ದು, ಅವರ ಮೇಲೆ ಇಲ್ಲಸಲ್ಲದ ಪ್ರಕರಣ ದಾಖಲಿಸಿ ಜೈಲಿಗೆ ಕಳಿಸಲಾಗಿದೆ. ಕರ್ನಾಟಕ ರಕ್ಷಣಾ ವೇದಿಕೆ ಹೋರಾಟವನ್ನು ಹತ್ತಿಕ್ಕಲು ಸರ್ಕಾರ ಇವರನ್ನು ಬಂಧಿಸಿದೆ. ಇವರು ಬಿಡುಗಡೆಯಾಗದೇ ಇದ್ದಲ್ಲಿ ಬೀದಿಗಿಳಿದು ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದ್ಧಾರೆ.

### ಕೊರ್ಲಕುಂಟೆ ಕನ್ನಡ ಸಾಂಸ್ಕೃತಿಕ ವೇದಿಕೆ ಖಂಡನೆ

» ಚಳ್ಳಕೆರೆ



ಕೊರ್ಲಕುಂಟೆ ಕನ್ನಡ ಸಾಂಸ್ಕೃತಿಕ ಸಂಘದ ಅಧ್ಯಕ್ಷ, ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ ನಾರಾಯಣಗೌಡರವರ ಬಂಧನವನ್ನು ಖಂಡಿಸಿ ರಾಜ್ಯ ಸರ್ಕಾರ ಕನ್ನಡಪರ ಚಳುವಳಿಗೆ ಪ್ರೋತ್ಸಾಹ ನೀಡುವ ಬದಲು ಕನ್ನಡ ಪರ ಹೋರಾಟಗಾರರ ಹೋರಾಟವನ್ನು ಹತ್ತಿಕ್ಕಲು ಪ್ರಯತ್ನಿಸಿರುವುದು ಸರಿಯಲ್ಲ. ನಾರಾಯಣಗೌಡರ ಬಿಡುಗಡೆ ಒತ್ತಾಯಿಸಿ ಬೃಹತ್ ಹೋರಾಟವನ್ನು ಹಮ್ಮಿಕೊಳ್ಳುವ ಇಂಗಿತ ವ್ಯಕ್ತಪಡಿಸಿದ್ಧಾರೆ.

### ೩೦ ರಂದು ಕುರಿ ಮತ್ತು ಮೇಕೆ ಸಾಕಣಿಕೆ ತರಬೇತಿ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕು ಬಬ್ಬೂರು ಫಾರಂನಲ್ಲಿರುವ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಜಿಲ್ಲೆಯ ರೈತರಿಗೆ "ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ" ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಡಿ. 30 ರಂದು ಬೆಳಗ್ಗೆ 10 ಗಂಟೆಗೆ ಹಮ್ಮಿಕೊಂಡಿದ್ದು ಆಸಕ್ತ ರೈತರು ಭಾಗವಹಿಸಬಹುದಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಪಶುಸಂಗೋಪನಾ ಇಲಾಖೆಯ ಉಪ ನಿರ್ದೇಶಕ ಡಾ.ಎನ್. ಕುಮಾರ್, ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕ ಡಾ. ಸಿ.ತಿಪ್ಪೇಸ್ವಾಮಿ, ನಿವೃತ್ತ ಸಹಾಯಕ ನಿರ್ದೇಶಕ ಡಾ. ದೊಡ್ಡಮಲ್ಲಯ್ಯ, ಹಿರಿಯೂರು ಪಶು ಆಸ್ಪತ್ರೆಯ ಮುಖ್ಯ ಪಶು ವೈದ್ಯಾಧಿಕಾರಿ ಡಾ. ನಾಗರಾಜ್ ಅವರು, ಕುರಿ ಮತ್ತು ಮೇಕೆಯಲ್ಲಿ ಉತ್ತಮ ತಳಿಗಳ ಆಯ್ಕೆ, ಕೊಟ್ಟಿಗೆ ಮತ್ತು ಮೇವಿನ ನಿರ್ವಹಣೆ ಹಾಗೂ ಅವುಗಳ ಆರೋಗ್ಯ ನಿರ್ವಹಣೆ ಬಗ್ಗೆ ವಿಶೇಷ ಉಪನ್ಯಾಸ ನೀಡುವರು. ತರಬೇತಿಯಲ್ಲಿ ಭಾಗವಹಿಸಿಸಲು ರಜನೀಕಾಂತ. ಆರ್ ಸಹಾಯಕ ಕೃಷಿ ನಿರ್ದೇಶಕರು, ಜಿಲ್ಲಾ ಕೃಷಿ ತರಬೇತಿ ಕೇಂದ್ರ, ಬಬ್ಬೂರು ಫಾರಂ (8277931058), ಉಷಾರಾಣಿ ಎಂ (9980730696) ಟಿ.ಪಿ. ರಂಜಿತಾ, ಕೃಷಿ ಅಧಿಕಾರಿ (8277930959) ಮತ್ತು ಪವಿತ್ರಾ ಎಂ. ಜೆ. (9535412286) ರವರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆದುಕೊಳ್ಳಬಹುದು.

## ಮಂತ್ರಾಕ್ಷತೆ ವಿತರಣೆ ಕಾರ್ಯಕ್ರಮದಲ್ಲಿ ಸರ್ದಾರ್ ಸೇವಾಲಾಲ್ ಸ್ವಾಮೀಜಿ ಅಭಿಪ್ರಾಯ

# ಹಿಂದುಗಳ ಭಕ್ತಿ ಕೇಂದ್ರ ಅಯೋಧ್ಯೆ


» ಚಿತ್ರದುರ್ಗ

ಹಿಂದುಗಳಿಗೆ ಅಯೋಧ್ಯ ಭಕ್ತಿಯ ಕೇಂದ್ರವಾಗಿದೆ. ಹಲವಾರು ವರ್ಷಗಳ ಹೋರಾಟದ ಪ್ರತಿಫಲವಾಗಿ ಜನವರಿಯಲ್ಲಿ ಶ್ರೀರಾಮನ ಮಂದಿರ ಉದ್ಘಾಟನೆಯಾಗುತ್ತಿದೆ. ಧರ್ಮವನ್ನು ನಾವು ಕಾದರೆ ಅದು ನಮ್ಮನ್ನು ಕಾಯುತ್ತದೆ ಎಂಬುದಕ್ಕೆ ಇದು ಸಾಕ್ಷಿಯಾಗಿದೆ ಎಂದು ಲಂಬಾಣಿ ಗುರುಪೀಠದ ಶ್ರೀ ಸರ್ದಾರ್ ಸೇವಾಲಾಲ್ ಸ್ವಾಮೀಜಿ ತಿಳಿಸಿದರು.

ಶ್ರೀ ರಾಮ ಜನ್ಮಭೂಮಿ ತೀರ್ಥಕ್ಷೇತ್ರ ಟ್ರಸ್ಟ್‌ವತಿಯಿಂದ ಅಯೋಧ್ಯೆಯಿಂದ ಬಂದಿರುವ ಮಂತ್ರಾಕ್ಷತೆಯನ್ನು ತಾಲೂಕು ಕೇಂದ್ರಗಳಿಗೆ ನಗರದ ಡಿಸಿಸಿ ಬ್ಯಾಂಕ್ ಮುಂಭಾಗದಲ್ಲಿರುವ ಶ್ರೀರಾಮ ಮಂದಿರದಲ್ಲಿ ಹಮ್ಮಿಕೊಂಡಿದ್ದ ವಿತರಣಾ ಕಾರ್ಯಕ್ರಮದ ಸಾನಿಧ್ಯವಹಿಸಿ ಮಾತನಾಡಿದರು.

1992ರಲ್ಲಿ ಬಾಬರಿ ಮಸೀದಿ ವಿಷಯದಲ್ಲಿ ನಡುಕವನ್ನುಂಟು ಮಾಡಿತ್ತು. ಆಂದು ಜನರಲ್ಲಿ ಆತಂಕ ಹಾಗೂ ಭಯವನ್ನು ಉಂಟು ಮಾಡಿತ್ತು, ಅಯೋಧ ಎನ್ನುವುದು ಹಿಂದುಗಳಿಗೆ ಶಕ್ತಿ ಕೇಂದ್ರವಾಗಿ ಹೊರ ಹೊಮ್ಮಿದೆ.ಅಯೋಧ್ಯೆ ಹಿಂದುಗಳ ಸಂಘಟನೆಯ ಕೇಂದ್ರವಾಗಿದೆ, ಶ್ರೀರಾಮ ಮಂದಿರ ನಿರ್ಮಾಣಕ್ಕೆ ದೊಡ್ಡದಾದ ಹೋರಾಟವೇ ನಡೆದಿದೆ ಎಂದರು.

ನಾವು ಧರ್ಮವನ್ನು ರಕ್ಷಣೆ ಮಾಡಿದರೆ ಅದು ನಮ್ಮನ್ನು ರಕ್ಷಣೆ ಮಾಡುತ್ತದೆ ಎನ್ನವುದಕ್ಕೆ ಅಯೋಧ್ಯಯ ಶ್ರೀರಾಮ ಮಂದಿರವೇ ಸಾಕ್ಷಿಯಾಗಿದೆ. ಶ್ರೀರಾಮ ಮಂದಿರ ನಿರ್ಮಾಣದಲ್ಲಿ ಹಲವಾರು ತೊಂದರೆಗಳು ಬಂದರೂ ಸಹಾ ಶ್ರೀರಾಮ ಭಕ್ತಾಧಿಗಳು ಅದನ್ನು ಲೆಕ್ಕಿಸದೇ





ಶ್ರೀರಾಮನ ಮಂದಿರ ನಿರ್ಮಾಣಕ್ಕೆ ಮುಂದಾಗಿದ್ದಾರೆ. ಹೋರಾಟಗಾರರ ಕನಸು ಜನವರಿಯಲ್ಲಿ ಸಾಕ್ಷತ್ಕಾರವಾಗಲಿದೆ. ಧರ್ಮದಲ್ಲಿ ನಡೆಯುವವರಿಗೆ ಜಯ ಖಂಡಿತವಾಗಿರುತ್ತದೆ ಆದರೆ ಅದಕ್ಕಾಗಿ ಕಾಯಬೇಕಿದೆ ಬೇಗ ಅದು ಸಿಗುವುದಿಲ್ಲ ಎಂದು ತಿಳಿಸಿದರು.

ಅಯೋಧ್ಯೆಯ ಕರಸೇವೆಯಲ್ಲಿ ಹಲವಾರು ಜನತೆ ಭಾಗಿಯಾಗಿದ್ದರು ಅದರಲ್ಲಿ ಈಗ ಹಲವಾರು ಜನತೆ ಇಲ್ಲವಾಗಿದ್ದಾರೆ. ಇನ್ನು ಕೆಲವರು ವಯೋವೃದ್ದರಾಗಿದ್ದಾರೆ. ಇವರ ಸೇವೆಯನ್ನು ನಾವುಗಳು ಸ್ಮರಣೆ ಮಾಡಬೇಕಿದೆ ಅವರ ಹೋರಾಟದ ಫಲವಾಗಿ ನಾವುಗಳು ಜನವರಿಯಲ್ಲಿ ಶ್ರೀರಾಮ ಮಂದಿರವನ್ನು ಕಾಣುತ್ತಿದ್ದೇವೆ ಎಂದು ಶ್ರೀಗಳು, ಇಂದು ನೀಡುವ ಮಂತ್ರಾಕ್ಷತೆಯನ್ನು ಜಿಲ್ಲೆಯ ಪ್ರತಿಯೊಂದು ಮನೆ ಮನೆಗೂ ತಲುಪಿಸಬೇಕಿದೆ. ಇದರಿಂದ ಅವರಲ್ಲಿ ಭಕ್ತಿ ಹೆಚ್ಚಾಗುತ್ತದೆ ಎಂದರು.

ಮೇದಾರ ಗುರುಪೀಠದ ಶ್ರೀ ಇಮ್ಮಡಿ ಕೇತೇಶ್ವರ ಸ್ವಾಮೀಜಿ ಮಾತನಾಡಿ, ಹಿಂದುಗಳಿಗೆಲ್ಲಾ 2024ರ ಜನವರಿಯಲ್ಲಿ ಶ್ರೀರಾಮ ಮಂದಿರದ ಉದ್ಘಾಟನೆ ಐತಿಹಾಸಿಕ ದಿನವಾಗಿದೆ. ಇದರಿಂದ ಶ್ರೀರಾಮನಿಗೂ ಸಂತೋಷವಾಗಲಿದೆ. ಇದರ ಬಗ್ಗೆ ಹೋರಾಟವನ್ನು ಮಾಡಿದವರಿಗೂ ಸಹಾ ಜಯ ಸಿಗಲಿದೆ. ಶ್ರೀರಾಮನ ಚರಿತೆಯನ್ನು ಎಲ್ಲರು ತಿಳಿಯಬೇಕಿದೆ ಎಂದು ಹೇಳಿದರು.

ಧರ್ಮವನ್ನು ಎಲ್ಲರು ಕಾಪಾಡಬೇಕಿದೆ. ನಮಗೆ ಈ ರೀತಿಯಾದ ಕಾರ್ಯಕ್ರಮದಲ್ಲಿ ಬಾಗಿಯಾಗಲು ಅವಕಾಶ ಸಿಕ್ಕಿರುವುದು ಸಂತೋಷವನ್ನು ತಂದಿದೆ. ಇಲ್ಲಿ ನೀಡುವ ಮಂತ್ರಾಕ್ಷತೆಯನ್ನು ಮನೆ ಮನೆಗೂ ತಲುಪಿಸಬೇಕಿದೆ. ಅದು ಎಲ್ಲರ ಕರ್ತವ್ಯವಾಗಿದೆ. ಶ್ರೀರಾಮ ಹಿಂದು ದೇವರಾಗಿದ್ದಾನೆ ಎಂದು ತಿಳಿಸಿದರು.

ವಿಶ್ವ ಹಿಂದು ಪರಿಷತ್‌ನ ಪ್ರಾಂತ ಸಹ ಸಂಯೋಜಕರಾದ ಪ್ರಭಂಜನ್ ಮಾತನಾಡಿ, ರಾಮಾಯಣದಲ್ಲಿ ಸಾಮನ್ಯಜರ ಜೀವನದ ಹಲವಾರು ಸಮಸ್ಯೆಗಳಿಗೆಪರಿಹಾರಸಿಗಲಿದೆ.ಬದುಕಿನಲ್ಲಿ ಯಾವ ರೀತಿ ಇರಬೇಕು ಎಂಬುದನ್ನು ರಾಮಾಯಣ ತಿಳಿಸುತ್ತದೆ. ಪ್ರತಿಯೊಂದು ಮನೆಯಿಂದಲೂ ಸಹಾ ಶ್ರೀರಾಮ ಮತ್ತು ಸೀತೆಎಂತಹ ಮಕ್ಕಳ ಜನನವಾಗಬೇಕಿದೆ. ಅದೇ ರೀತಿ ಮನೆಯಲ್ಲಿ ಸಹೋದರರು ರಾಮ ಭರತರಂತೆ ಇರಬೇಕಿದೆ. ರಾಮ ಎಲ್ಲರಿಗೂ ಆದರ್ಶನಾಗಿದ್ದಾನೆ. ರಾಮನಲ್ಲಿ ಎಲ್ಲಾ ರೀತಿಯ ಒಳ್ಳೇಯ ಗುಣಗಳು ಇವೆ. ಮಂದಿರ ನಿರ್ಮಾಣಕ್ಕೆ ಸುಧೀರ್ಘವಾದ ಹೋರಾಟ ನಡೆದಿದ್ದು ಶ್ರೀರಾಮ ಮಂದಿರ ನಿರ್ಮಾಣಕ್ಕೆ ಮಾತ್ರವಾಗಿದೆ ಎಂದರು.

ಇದೇ ಸಂದರ್ಭಧಲ್ಲಿ ಚಿತ್ರದುರ್ಗ, ಚಳ್ಳಕೆರೆ, ಹೊಳಲ್ಕರೆ, ಹೊಸದುರ್ಗ ಮೊಳಕಾಲ್ಮೂರು ಮತ್ತು ಹಿರಿಯೂರು ತಾಲ್ಲೂಕುಗಳಿಗೆ ಮಂತ್ರಾಕ್ಷಾತೆಯನ್ನು ವಿತರಣೆ ಮಾಡಲಾಯಿತು. ಹಾಗೂ ಕರ ಸೇವಕರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸ್ವಯಂ ಸೇವಕರಾದ ಮಧುಕರ್, ವಿಭಾಗ ಸಹಾ ಕಾರ್ಯದರ್ಶಿ ಚಂದ್ರಶೇಖರ್, ಸ್ವಯಂ ಸೇವಕರಾದ ನಾಗರಾಜ್ ಜಿಲ್ಲಾ ಕಾರ್ಯದರ್ಶೀ ರುದ್ರೇಶ್ ಭಾಗವಹಿಸಿದ್ದರು.ಇದಕ್ಕೂ ನಗರದ ರಾಮ ಮಂದಿರದಲ್ಲಿ ಆಯೋಧ್ಯೆಯಿಂದ ಬಂದಿರುವ ಮಂತ್ರಾಕ್ಷತೆ, ಕರ ಪತ್ರಗಳಿಗೆ ಪೂಜೆ ಸಲ್ಲಿಸಲಾಯಿತು.

ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ. ಎಸ.ಕೆ.ಬಸವರಾಜನ್, ಮುಖಂಡರಾದ ಅನಿತ್ ಕುಮಾರ್, ರಘುಚಂದನ್, ಮುರಳಿ, ಡಾ.ಸಿದ್ದಾರ್ಥ, ಮಲ್ಲಿಕಾರ್ಜನ್, ಸುರೇಶ್ ಸಿದ್ದಾಪುರ ಬದರಿನಾಥ್, ಶಿವಣ್ಣಚಾರ್, ವಿಶ್ವನಾಥಯ್ಯ, ಜಿ.ಎಂ.ಸುರೇಶ್, ನಂದಿ ನಾಗರಾಜ್, ಈಶ್ವರಪ್ಪ, ರಾಮದಾಸ್, ತಿಪ್ಪೇಸ್ವಾಮಿ ಬಾಗರಾಜ್ ಬೇದ್ರೇ, ರಂಗನಾಥ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಗ್ರಾಹಕರು ವಸ್ತುಗಳನ್ನು ಖರೀದಿಸುವಾಗ ಜಾಗರೂಕರಾಗಿರಬೇಕು: ಜಿಲ್ಲಾಧಿಕಾರಿ ಡಾ.ವೆಂಕಟೇಶ್

» ದಾವಣಗೆರೆ

ನಾವೆಲ್ಲರೂ ಹುಟ್ಟಿನಿಂದ ಸಾಯುವವರೆಗೂ ಒಂದಲ್ಲಾಒಂದುರೀತಿಯಲ್ಲಿಗ್ರಾಹಕರಾಗಿರುತ್ತೇವೆ. ಆದ್ದರಿಂದ ನಾವು ಖರೀದಿಸುವ ವಸ್ತುಗಳ ಗುಣಮಟ್ಟ ಮತ್ತು ಸೇವೆಗಳ ಕುರಿತು ಜಾಗರೂಕರಾಗಿರಬೇಕು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್.ಎಂ.ವಿ ತಿಳಿಸಿದರು.

ಗುರುವಾರ ಹರಿಹರದ ಎಸ್.ಜೆ.ವಿ.ಪಿ ಕಾಲೇಜು ಸಭಾಂಗಣದಲ್ಲಿ "ಇ-ಕಾಮರ್ಸ್ ಮತ್ತು ಡಿಜಿಟಲ್ ವ್ಯಾಪಾರದ ಯುಗದಲ್ಲಿ ಗ್ರಾಹಕರ ರಕ್ಷಣೆ" ಎಂಬ ಘೋಷವಾಕ್ಯದೊಂದಿಗೆ ಹಮ್ಮಿಕೊಳ್ಳಲಾಗಿದ್ದ "ರಾಷ್ಟ್ರೀಯ ಗ್ರಾಹಕರ ದಿನಾಚರಣೆ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದಿನ ಕಾಲದಲ್ಲಿ ಒಂದು ವಸ್ತುವನ್ನು ಕೊಟ್ಟು ಮತ್ತೊಂದು ವಸ್ತುವನ್ನು ವಿನಿಮಯ ಮಾಡಿಕೊಳ್ಳುವ ಮೂಲಕ ಜೀವನ ಸಾಗಿಸುವಂತಹ ವಿನಿಮಯ ಪದ್ಧತಿಯಿತ್ತು. ಆದರೆ ನಾಗರಿಕತೆ ಬದಲಾದಂತೆ ಪ್ರಚಲಿತ ಯುಗದಲ್ಲಿ ಪ್ರತಿಯೊಬ್ಬರೂ ಸಹ ಆನ್‌ಲೈನ್ ಮೂಲಕ ಡಿಜಿಟಲ್ ಪಾವತಿಯನ್ನು ಮಾಡಿ ಅಗತ್ಯವಿರುವ ವಸ್ತು, ಪದಾರ್ಥ ಅಥವಾ ಸೇವೆಗಳನ್ನು ಪಡೆಯುತ್ತಿದ್ದಾರೆ.

ಗ್ರಾಹಕರಾದ ಪ್ರತಿಯೊಬ್ಬರೂ ಖರೀದಿಸುವ ವಸ್ತುಗಳ ಗುಣಮಟ್ಟದಲ್ಲಿ ವ್ಯತ್ಯಾಸವಾದಾಗ, ಗ್ರಾಹಕ ಮೋಸಕ್ಕೊಳಗಾಗುತ್ತಾನೆ. ಆದ್ದರಿಂದ ಗ್ರಾಹಕರು ಮೋಸದ ಬಗ್ಗೆ ಅಸಡ್ಡೆ ತೋರದೆ ಜಾಗರೂಕರಾಗಿ ಕಾನೂನಿನ ಅಡಿಯಲ್ಲಿ ವಂಚಿಸಿದವರಿಗೆ ಶಿಕ್ಷೆಗೆ ಒಳಪಡಿಸಲು



ಮುಂದಾದಾಗ ಇಂತಹ ಮೋಸಗಳು ಮರುಕಳಿಸುವುದಿಲ್ಲ. ಅಲ್ಲದೆ ಡಿಜಿಟಲ್ ಪಾವತಿಯ ಈ ಕಾಲದಲ್ಲಿ ಮೊಬೈಲ್‌ಗಳಿಗೆ ಬರುವ ಓಟಿಪಿ, ಆಧಾರ್ ನಂಬರ್, ಬ್ಯಾಂಕ್‌ಗೆ ಅಥವಾ ಇನ್ನಿತರೆ ಯಾವುದೇ ದಾಖಲೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಕಳುಹಿಸುವಂತೆ ಆನ್‌ಲೈನ್ ಮೂಲಕ ಸಂದೇಶಗಳು ಬಂದರೆ, ಸಾರ್ವಜನಿಕರು ಇವುಗಳಿಗೆ ಮರುಹೋದಲ್ಲಿ ವಂಚನೆಗಳಿಗೆ ಒಳಗಾಗಬೇಕಾಗುತ್ತದೆ. ಯಾವುದೇ ಬ್ಯಾಂಕ್‌ಗಳು ಗ್ರಾಹಕರಿಗೆ ಕರೆ ಮಾಡಿ ನಿಮ್ಮ ಓಟಿಪಿ, ಆಧಾರ್ ವಿವರ ಹೇಳಲು ತಿಳಿಸುವುದಿಲ್ಲ. ಆದ್ದರಿಂದ ವಂಚನೆ ಜಾಲದ ಬಗ್ಗೆ ಎಚ್ಚರ ವಹಿಸಬೇಕಾಗುತ್ತದೆ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ಮಾತನಾಡಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆಯ ಉದ್ದೇಶ ಬಹಳಷ್ಟು ಜನರಿಗೆ ಗ್ರಾಹಕರ ರಕ್ಷಣೆಗಾಗಿ ಇರುವ ಕಾನೂನುಗಳ ಮಾಹಿತಿ ಇರುವುದಿಲ್ಲ. ಈ ನಿಟ್ಟಿನಲ್ಲಿ ಗ್ರಾಹಕರ ರಕ್ಷಣೆಗಾಗಿ ಕಾನೂನಿನಲ್ಲಿ ಯಾವ ರೀತಿಯ ಅವಕಾಶಗಳಿವೆ ಎಂಬುದರ ಕುರಿತು ಜಾಗೃತಿ ಮೂಡಿಸುವುದಾಗಿದೆ.

ಡಿಜಿಟಲ್ ವ್ಯಾಪಾರದ ಯುಗದಲ್ಲಿ ಗ್ರಾಹಕರಿಗೆ ಮೋಸ, ವಂಚನೆ ಮತ್ತು ಅನುಕೂಲತೆಗಳನ್ನು ಮರೀಚಿಕೆ ಮಾಡುವಂತಹ ಪ್ರಯತ್ನಗಳು ಮಾರಾಟಗಾರರಿಂದ ಸಂಭವಿಸುತ್ತವೆ. ಆದ್ದರಿಂದ ಗ್ರಾಹಕರ ರಕ್ಷಣೆ ಅತ್ಯವಶ್ಯಕವಾಗಿದೆ. ಗ್ರಾಹಕರಿಗೆ ವಸ್ತುಗಳ ಖರೀದಿಸುವಿಕೆಗೆ ಯಾವುದೇ ರೀತಿಯ ಸಮಸ್ಯೆಯಾಗುತ್ತಿದ್ದರೆ ಸಂಬಂಧಪಟ್ಟ ಇಲಾಖೆಯವರು ಗ್ರಾಹಕರಿಗೆ ಬೆಂಬಲ ನೀಡಿ ಸೂಕ್ತ ನ್ಯಾಯ ಒದಗಿಸಲು ಮುಂದಾಗಬೇಕೆಂದರು.

ವಸ್ತು ಪ್ರದರ್ಶನ: ಕಾರ್ಯಕ್ರಮದ ಅಂಗವಾಗಿ ಕಾನೂನು ಮಾಪನ ಶಾಸ್ತ್ರ ಇಲಾಖೆ ವತಿಯಿಂದ ಗ್ರಾಹಕರ ಜಾಗೃತಿಗಾಗಿ ವಸ್ತು ಪ್ರದರ್ಶನ ಏರ್ಪಡಿಸಲಾಗಿತ್ತು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಮಹಾಂತೇಶ್ ಈರಪ್ಪ ಶಿಗ್ಲಿ, ಸದಸ್ಯರಾದ ಸಿ.ಎಸ್ ತ್ಯಾಗರಾಜನ್ ಮತ್ತು ಬಿ.ವಿ ಗೀತಾ, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯಾಜ್ಯಗಳ ಇಲಾಖೆ ಉಪನಿರ್ದೇಶಕ ಶಿದ್ರಾಮ ಮಾರಿಹಾಳ್ ಉಪಸ್ಥಿತರಿದ್ದರು.

# ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರಿಗೆ ಭದ್ರತೆ, ಭಯ ಮುಕ್ತ ವಾತಾವರಣ ಅವಶ್ಯ: ಡಾ. ವೆಂಕಟೇಶ್ ಎಂ.ವಿ



» ದಾವಣಗೆರೆ

ಮಹಿಳೆಯರು ಕೆಲಸ ಮಾಡುವ ಸ್ಥಳಗಳಲ್ಲಿ ಸುರಕ್ಷಿತ ಹಾಗೂ ಭಯ ಮುಕ್ತ ಮತ್ತು ಗೌರವಯುತ ವಾತಾವರಣ ಕಲ್ಪಿಸಬೇಕೆಂದು ಜಿಲ್ಲಾಧಿಕಾರಿ ಡಾ;ವೆಂಕಟೇಶ್ ಎಂ.ವಿ ತಿಳಿಸಿದರು.ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜರುಗಿದ ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ತಡೆ ಕಾಯ್ದೆ-2013 ಕುರಿತ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುತ್ತಿರುವ ಲೈಂಗಿಕ ಕಿರುಕುಳ ತಡೆಯಲು ಈ ಕಾಯ್ದೆಯನ್ನು ಜಾರಿಗೊಳಿಸಲಾಗಿದ್ದು, ಸರ್ಕಾರಿ, ಅರೆ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಶಾಲಾ, ಕಾಲೇಜು, ಸಂಸ್ಥೆಗಳಲ್ಲಿ ಆಂತರಿಕ ಕಿರುಕುಳ ಸಮಿತಿ ರಚಿಸಲಾಗಿದೆ. ಮಹಿಳೆಯರು ತಮ್ಮ ಮೇಲಾಗುವ ದೌರ್ಜನ್ಯ ಹಾಗೂ ಕಿರುಕುಳವನ್ನು ಗೌಪ್ಯವಾಗಿಡದೆ ಮುಕ್ತವಾಗಿ ಆಂತರಿಕ ಕಿರುಕುಳ ಸಮಿತಿಗೆ ದೂರ ನೀಡಬಹುದು. ಇಲಾಖೆಗಳು ನೊಂದ ಮಹಿಳೆಯರ ಹೆಸರನ್ನು ಬಹಿರಂಗಪಡಿಸದೆ ತಪ್ಪಿತಸ್ಥರನ್ನು ವಿಚಾರಣೆಗೆ ಒಳಪಡಿಸಬೇಕು ಎಂದರು. ಕೆಲಸದ ಸ್ಥಳಗಳಲ್ಲಿ ಮಹಿಳೆಯರಿಗೆ ಭದ್ರತೆಯನ್ನು ಒದಗಿಸಿ, ಎಲ್ಲರಿಗೂ ಸಮಾನವಾದ ಅವಕಾಶವನ್ನು ಕಲ್ಪಿಸಬೇಕು. ಈ ಕಾಯ್ದೆಗೆ ಸಂಬಂಧಿಸಿದಂತೆ ಪುರುಷ ಹಾಗೂ ಮಹಿಳೆಯರಿಗೆ ಜಾಗೃತಿ ಅತ್ಯಗತ್ಯವಾದುದು.

## ಪ್ರಮುಖ ಸುದ್ದಿ

# ಹೊಸದುರ್ಗಕ್ಕೆ ಆಗಮಿಸಿದ ಶ್ರೀರಾಮನ ಮಂತ್ರಾಕ್ಷತೆ

» ಹೊಸದುರ್ಗ

ಪಟ್ಟಣಕ್ಕೆ ಪವಿತ್ರ ಮಂತ್ರಾಕ್ಷತೆಯ ಬವ್ಯ ಮೆರವಣಿಗೆ ನಗರದ ಟಿಬಿ ವೃತ್ತದಲ್ಲಿ ವಿಶ್ವ ಹಿಂದೂ ಪರಿಷತ್ ಬಜರಂಗದಳ ಹಾಗೂ ಸಮಸ್ತ ಹಿಂದೂ ಕಾರ್ಯಕರ್ತರು ಅತ್ಯಂತ ಭಕ್ತಿಯಿಂದ ಸ್ವಾಗತಿಸಿದರು,

ಅಂಬೇಡ್ಕರ್ ವೃತ್ತದಲ್ಲಿ ಪೂರ್ಣ ಕುಂಭದೊಂದಿಗೆ ಸ್ವಾಗತಿಸಿದ ಹಿಂದೂ ಮಹಿಳೆಯರು. ವಿವಿಧ ಸ್ಥಬ್ಧ ಚಿತ್ರಗಳು ಪ್ರಭು ಶ್ರೀ ರಾಮನ ಭಕ್ತರಿಂದ ದಾರಿಯುದ್ದಕ್ಕೂ ಪೂಜೆ,ಭಜನೆ, ಮೂಲಕ ಗಾಂಧಿಯುತ್ತದ ಮಾರ್ಗವಾಗಿ ಗಣೇಶ ದೇವಸ್ಥಾನ, ದುರ್ಗಾಂಬಿಕ ದೇವಸ್ಥಾನ, ಹಾಗೂ ಕೋಟೆಯ ಶ್ರೀರಾಮ ದೇವಸ್ಥಾನದಲ್ಲಿ ಬಿಜಂಗೈಯ್ಯಲಾಯಿತು,

ಟಿ ಬಿ ವೃತ್ತದಲ್ಲಿ ನಡೆದ ಸ್ವಾಗತ ಕಾರ್ಯಕ್ರಮದಲ್ಲಿ ಬ್ರಹ್ಮ ವಿದ್ಯಾನಗರದ ಭಗೀರಥಗುರುಪೀಠದಉಪವಿರಜಗದ್ಗುರು ಡಾಕ್ಟರ್ ಶ್ರೀ ಪುರುಷೋತ್ತಮಾನಂದ ಪುರಿ ಮಹಾಸ್ವಾಮಿಗಳು ಶ್ರೀರಾಮ ಮಂತ್ರಾಕ್ಷತೆಗೆ ನಮನ ಸಲ್ಲಿಸಿ ಪ್ರಭು ಶ್ರೀ ರಾಮನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ,ನಂತರ ಮಾತನಾಡಿದ ಶ್ರೀಗಳು, ಮರ್ಯಾದ ಪುರುಷೋತ್ತಮ ಏಕ ಪತ್ನಿ ವ್ರತಸ್ಥ ಪ್ರಭು



ಶ್ರೀ ರಾಮನ ಮಂತ್ರಾಕ್ಷತೆ ಹೊಸದುರ್ಗಕ್ಕೆ ಆಗಮಿಸಿದ್ದು ಈ ಪವಿತ್ರರ ಮಂತ್ರಾಕ್ಷತೆ ಶ್ರೀರಾಮನ ನೂತನ ದೇವಾಲಯದ ಭಾವಚಿತ್ರವನ್ನು ತಾಲೂಕಿನ ಪ್ರತಿ ಹಳ್ಳಿಗಳ ಭಕ್ತರ ಮನೆಗೆ ತಲುಪಿಸಲಾಗುವುದು.

ಸನಾತನ ಪರಂಪರೆಯ ಹಿಂದುಗಳ ಆರಾಧ್ಯ ದೈವ ಶ್ರೀರಾಮಚಂದ್ರರ ಪ್ರಾಣ ಪ್ರತಿಷ್ಠಾಪನೆ, ನೂತನ ದೇವಾಲಯ ಆರಂಭೋತ್ಸವ ಹಾಗೂ ಕಳಸಾರೋಹಣ ಕಾರ್ಯಕ್ರಮ ನಿರಂತರ 500 ವರ್ಷಗಳ ಹೋರಾಟದ ತರುವಾಯ ಅಯೋಧ್ಯೆಯಲ್ಲಿ ಜನವರಿ 22 ರಂದು ಪುನರ್ ಪ್ರತಿಷ್ಠಾಪನವಾಗಿಲಿದ್ದು ಅಂದು ಸಂಜೆ ತಮ್ಮ ತಮ್ಮ ಊರಿನ ದೇವಾಲಯಗಳಲ್ಲಿ ವಿಶೇಷ ಪೂಜೆ ಪ್ರಸಾದ, ಹೋಮ ಹವನ ಸಲ್ಲಿಸಿ, ಉತ್ತರದಿಕ್ಕಿನಲ್ಲಿ ಪಂಚ ದೀಪಗಳನ್ನ ಹಚ್ಚುವುದರ ಮೂಲಕ ಶ್ರೀರಾಮನಿಗೆ ಜ್ಯೋತಿ ಬೆಳಗೋಣ, ಎಂದರು.

ಟಿಬಿ ವೃತ್ತದಿಂದ ನಡೆದ ವಿಶೇಷ ಶೋಭ ಯಾತ್ರೆಯಲ್ಲಿ ನೂರಾರು ಸಂಖ್ಯೆಯ ಹಿಂದೂ ಕಾರ್ಯಕರ್ತರು ಭಾಗವಹಿಸಿದ್ದರು.

ಇನ್ನೂ ಅಯೋಧ್ಯೆಯ ಶ್ರೀರಾಮ ಜನ್ಮ ಭೂಮಿಯಿಂದ ಚಿತ್ರದುರ್ಗದ ಎಲ್ಲಾ ತಾಲ್ಲೂಕುಗಳ ಮನೆ ಮನೆಗೆ ತಲುಪಿಸಲು ಪವಿತ್ರ ಮಂತ್ರಾಕ್ಷತೆ ಆಗಮಿಸಿದ್ದು ಈ ಒಂದು ಮೆರವಣಿಗೆ ಇಂದು ಹೊಸದುರ್ಗ ಪಟ್ಟಣಕ್ಕೆ ಆಗಮಿಸಿದ್ದು ವಿಶ್ವ ಹಿಂದೂ ಪರಿಷತ್ ಬಜರಂಗದಳದ ವತಿಯಿಂದ ಈ ಮೆರವಣಿಗೆ ಪುಷ್ಪಾರ್ಚನೆ ಮಾಡುವ ಮೂಲಕ ಅದ್ದೂರಿಯಾಗಿ ಸ್ವಾಗತ ಮಾಡಲಾಯಿತು. ಹಾಗೂ ಶ್ರೀರಾಮ ಹಾಗೂ ಹನುಮನ ಜಪ ಮಾಡುವ ಮೂಲಕ ಮೆರವಣಿಗೆ ನಡೆಸಿದ್ದು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮಹಿಳೆಯರು ಹಾಗೂ ಮುಖಂಡರು ಶ್ರೀರಾಮನ ಜಪ ಮಾಡುವ ಮೂಲಕ ಬವ್ಯ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದು ಶ್ರೀರಾಮ ದೇವರಿಗೆ ಗೌರವವನ್ನ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ವಿಶ್ವ ಹಿಂದೂ ಪರಿಷತ್ ಅಧ್ಯಕ್ಷ ಶ್ರೀನಿವಾಸ್ ಮೂರ್ತಿ, ಪರಿವಾರದ ಕಾರ್ಯಕರ್ತರಾದ ಸದ್ಗುರು ಪ್ರದೀಪ್, ಜಗದೀಶ್ ರಾಮಯ್ಯ,ಹೆಬ್ಬಳ್ಳಿ ಮಲ್ಲಿಕಾರ್ಜುನ್,ಕೆ ಎಸ್ ಕಲ್ಮಠ, ಮಾಜಿ ಜಿ ಪಂ ಸದಸ್ಯ ಆರ್ ಹನುಮಂತಪ್ಪ, ಡಿ ಗುರುಸ್ವಾಮಿ, ದಿಲ್ಸೆ ದಿಲೀಪ್, ವಕೀಲ ರವಿಕುಮಾರ್ ,ಡಿ ಟಿ ಲಿಂಗರಾಜು, ಶಿವಪ್ರಸಾದ್, ಸಮಾಜ ಸೇವಕ ತುಂಬಿನಕೆರೆ ಬಸವರಾಜ್,ಪಂಪ,ಪ್ರವೀಣ್ ಮದುರೆ, ಸಾಚಾ ಮಂಜಯ್ಯ, ಕುಮಾರ್ ಹುರುಳಿಹಳ್ಳಿ, ಹಾಗೂ ಅಪಾರ ಹಿಂದೂ ಭಕ್ತರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಅಯ್ಯಪ್ಪಸ್ವಾಮಿ ದರ್ಶನ ಪಡೆಯಲು ಸೈಕಲ್ ಏರಿಹೊರಟ ಭಕ್ತ



» **ಚಳ್ಳಕೆರೆ**

ನಗರದ ಹಳೇಟೌನ್ ನಿವಾಸಿ ಸ್ವಾಮಿ(21) ಎಂಬ ಯುವಕ ಶಬರಿಮಲೆಯ ಶ್ರೀಅಯ್ಯಪ್ಪಸ್ವಾಮಿಯ ದರ್ಶನ ಪಡೆಯಲು ಸೈಕಲ್ ಯಾತ್ರೆಯನ್ನು ಕೈಕೊಂಡಿದ್ದಾನೆ. ಇದೇ ಮೊಟ್ಟ ಮೊದಲ ಬಾರಿಗೆ ಅಯ್ಯಪ್ಪಸ್ವಾಮಿಯ ಮಾಲೆಧರಿಸಿದ ಈತ ಹಿರಿಯೂರು, ಹುಳಿಯಾರ್, ಚಿಕ್ಕನಾಯಕಹಳ್ಳಿ, ನಾಗಮಂಗಲ, ಮೈಸೂರು, ಮಲೆಮಹದೇಶ್ವರಬೆಟ್ಟದ ಮೂಲಕ ಶಬರಿಮಲೆ ತಲುಪಲಿದ್ದಾರೆ. ನಗರದ ಹಳೇಪುರಸಭೆಯ ಉದ್ಯಾನವನದಲ್ಲಿನ ಸನ್ನಿಧಿಯಿಂದ ಸೈಕಲ್ ಮೇಲೆ ಹೊರಟ ಈತನನ್ನು ನೂರಾರು ಭಕ್ತರು ಶುಭಹಾರೈಸಿ ಬೀಳ್ಕೊಟ್ಟರು. ಶ್ರೀಅಯ್ಯಪ್ಪಸ್ವಾಮಿಯ ದರ್ಶನಕ್ಕೆ ಮಾಲಾಧಾರಿಗಳು ತಮ್ಮದೇಯಾದ ರೀತಿಯಲ್ಲಿ ಪ್ರವಾಸ ಕೈಗೊಳ್ಳುತ್ತಾರೆ. ಕೆಲವರು ಕಾಲ್ನಡಿಗೆಯಲ್ಲಿ ಹೊರಟರೆ, ಇನ್ನೂ ಕೆಲವರು ಸೈಕಲ್ ಮೇಲೆ ಸ್ವಾಮಿಯ ದರ್ಶನಕ್ಕೆ ತೆರಳುತ್ತಿದ್ದಾರೆ. ಸ್ವಾಮಿಯ ಭಕ್ತಿಗೆ ನೆರೆದಿದ್ದ ಎಲ್ಲಾ ಭಕ್ತರು ಮೆಚ್ಚುಗೆ ವ್ಯಕ್ತಪಡಿಸಿದರು.ಈ ಬಗ್ಗೆ ಪತ್ರಿಕೆಯೊಂದಿಗೆ ಸಂತಸವನ್ನು ಹಂಚಿಕೊಂಡ ಸ್ವಾಮಿ, ನನಗೆ ಸೈಕಲ್ ಮೇಲೆ ಶಬರಿಮಲೆಗೆ ತೆರಳಿ ಸ್ವಾಮಿಯ ದರ್ಶನ ಪಡೆಯಲು ಹೆಚ್ಚು ಉತ್ಸಾಹುಕನಾಗಿದ್ದೇನೆ. ಪ್ರತಿನಿತ್ಯ ಸುಮಾರು 50-60 ಕಿ.ಮೀ ಸೈಕಲ್ ತುಳಿಯುತ್ತೇನೆ. ಬಿಸಿ ಹೆಚ್ಚಿದರೆ ವಿಶ್ರಾಂತಿ ಪಡೆದು, ಬೆಳಗ್ಗೆ ಮತ್ತು ಸಂಜೆ ಪ್ರಯಾಣ ಬೆಳೆಸುತ್ತೇನೆಂದರು. ರಾತ್ರಿ ವೇಳೆಯಲ್ಲಿ ಗ್ರಾಮದ ದೇವಸ್ಥಾನ, ಪಡಿಗಟ್ಟೆಗಳಲ್ಲಿ ವಿಶ್ರಾಂತಿ ಪಡೆಯುವುದಾಗಿ ತಿಳಿಸಿದರು.

### ವಿಶ್ವಮಾನವ ದಿನಾಚರಣೆ ಡಿ.29ರಂದು

▪ **ಬಳ್ಳಾರಿ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರಕವಿ ಕುವೆಂಪು ಜನ್ಮದಿನ ಅಂಗವಾಗಿ ವಿಶ್ವಮಾನವ ದಿನಾಚರಣೆ ಕಾರ್ಯಕ್ರಮವನ್ನು ಡಿ.29ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸಾಂಸ್ಕೃತಿಕ ಸಮುಚ್ಚಯ ಆವರಣದ ಹೊಂಗಿರಣದಲ್ಲಿ ಏರ್ಪಡಿಸಲಾಗಿದೆ. ಯುವಜನ ಸಬಲೀಕರಣ, ಕ್ರೀಡಾ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ನಾಗೇಂದ್ರ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.ಸಂಸದರಾದ ವೈ.ದೇವೇಂದ್ರಪ್ಪ, ಕರಡಿ ಸಂಗಣ್ಣ, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಈ.ತುಕಾರಾಂ, ಜೆ.ಎನ್.ಗಣೇಶ್, ಬಿ.ಎಂ.ನಾಗರಾಜ್, ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ್ ಬಿ.ಪಾಟೀಲ್, ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಮಹಾನಗರ ಪಾಲಿಕೆಯ ಉಪಮಹಾಪೌರೆ ಬಿ.ಜಾನಕಿ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.ಮೋಕಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಮುಖ್ಯಸ್ಥರು ಹಾಗೂ ಸಹ ಪ್ರಾಧ್ಯಾಪಕರಾದ ಡಾ.ಕಲಾವತಿ.ಬಿ.ಜಿ ಅವರು ವಿಶೇಷ ಉಪನ್ಯಾಸ ನೀಡುವರು.ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಹೊನ್ನೂರಪ್ಪಟ ಅವರು ಉಪಸ್ಥಿತರಿರಲಿದ್ದಾರೆ.

### ಪಟ್ಟಿ ಬಿಡುಗಡೆ

» **ದಾವಣಗೆರೆ**

ಪ್ರಸಕ್ತ ಸಾಲಿನಲ್ಲಿ 2 ವರ್ಷದ ಬಿ.ಇಡಿ ಕೋರ್ಸ್‌ಗೆ ಸರ್ಕಾರಿ ಕೋಟಾದ ಆಯ್ಕೆಯಾದವರ ಪಟ್ಟಿಯನ್ನು ವೆಬ್‌ಸೈಟ್ http://Schooleducation.karnataka.gov.in ಪ್ರಕಟಿಸಲಾಗಿದೆ. ಸೀಟು ಹಂಚಿಕೆಯಾದ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಚಲನ್ ಡೌನ್‌ಲೋಡ್ ಮಾಡಿಕೊಂಡು ದಾಖಲಾತಿ ಶುಲ್ಕವನ್ನು ಎಸ್‌ಬಿಐ ಬ್ಯಾಂಕಿನಲ್ಲಿ ಪಾವತಿಸಿ ಡಿಸೆಂಬರ್ 30 ರಿಂದ ಜನವರಿ 3 ರೊಳಗಾಗಿ ಚಲನ್‌ನನ್ನು ದಾವಣಗೆರೆ ಡಯಟ್ ಕಚೇರಿಗೆ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪತ್ರವನ್ನು ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ: 9164489972, ಕಚೇರಿ ದೂ.ಸಂ: 08192-231156 ನ್ನು ಸಂಪರ್ಕಿಸಿ.

### ತ್ರೈಮಾಸಿಕ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ

# ಅಧಿಕಾರಿಗಳು ಸಂತ್ರಸ್ತರಿಗೆ ನೆರವು ನೀಡುವುದರೊಂದಿಗೆ ನೈತಿಕ ಬೆಂಬಲ ನೀಡಿ: ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ

» **ಚಿತ್ರದುರ್ಗ**

ಅಧಿಕಾರಿಗಳು ದೌರ್ಜನ್ಯಕ್ಕೊಳಗಾದ ಸಂತ್ರಸ್ತರಿಗೆ ನೆರವು ನೀಡುವುದರ ಜೊತೆಗೆ, ಯಾವುದೇ ಒತ್ತಡ ಹಾಗೂ ರಾಜಿಗೆ ಒಳಗಾಗದೆ, ಅಪರಾಧಿಗಳಿಗೆ ಶಿಕ್ಷೆ ದೊರಕುವವರೆಗೂ ಕಾನೂನು ರೀತ್ಯಾ ನೈತಿಕವಾಗಿಯೂ ಬೆಂಬಲ ನೀಡಿ, ಮನೋಸ್ಥೈರ್ಯ ತುಂಬಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಅವರು ಹೇಳಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ, ಗುರುವಾರ ಜರುಗಿದ 2023ನೇ ಸಾಲಿನ 4ನೇ ತ್ರೈಮಾಸಿಕ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಹಾಗೂ ಪಂಗಡದವರ ಮೇಲಿನ ದೌರ್ಜನ್ಯ ಪ್ರತಿಬಂಧಕ ಕಾಯ್ದೆಯ ಅನುಸಾರ ದೌರ್ಜನ್ಯಕ್ಕೆ ಒಳಗಾದವರಿಗೆ ರಕ್ಷಣೆ ಒದಗಿಸಿ ಪರಿಹಾರ ನೀಡಲಾಗುತ್ತಿದೆ. ಪ್ರಕರಣದ ವಿಚಾರಣೆ ಸಂದರ್ಭದಲ್ಲಿ ನ್ಯಾಯಾಲಯಕ್ಕೆ ಹಾಜರಾದರೆ ದಿನಭತ್ಯೆಯನ್ನು ಸಹ ನೀಡಲಾಗುತ್ತಿದೆ. ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದರೂ ಶೇ.1 ರಿಂದ 2 ರಷ್ಟು ಪಕ್ರರಣಗಳಲ್ಲಿ ಮಾತ್ರ ಶಿಕ್ಷೆಯಾಗುತ್ತಿರುವುದು ಕಳವಳದ ಸಂಗತಿ. ಖುಲಾಸೆ ಪ್ರಕರಣಗಳು ದೌರ್ಜನ್ಯಗಳ ಹೆಚ್ಚಳಕ್ಕೆ ಪರೋಕ್ಷವಾಗಿ ಕಾರಣವಾಗುತ್ತವೆ. ಇದಕ್ಕೆ ಅನುವು ಮಾಡಿಕೊಡದೆ ಆರೋಪಿಗಳಿಗೆ ಶಿಕ್ಷೆ ಆಗುವಂತಾಗಲು ನೆರವಾಗಬೇಕು ಎಂದರು.

**ಜಾಗೃತಿ ಕಾರ್ಯಕ್ರಮಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಿ** : ಪರಿಶಿಷ್ಟ ಜಾತಿ ಹಾಗೂ ಪಂಗಡದವರ ಮೇಲಿನ ದೌರ್ಜನ್ಯ ಪ್ರತಿಬಂಧಕ ಕಾಯ್ದೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕಾರ್ಯಕ್ರಮಗಳನ್ನು ಆಯೋಜಿಸಿ ವ್ಯಾಪಕ ಪ್ರಚಾರ ನೀಡಬೇಕು.

ಜಾಗೃತಿ ಕಾರ್ಯಕ್ರಮಗಳನ್ನು ಕೇವಲ ಪರಿಶಿಷ್ಟ ಜಾತಿ ಹಾಗೂ ಪಂಗಡ ಕಾಲೋನಿಗಳಲ್ಲಿ ಆಯೋಜಿಸದೇ, ಎಲ್ಲಾ ವರ್ಗಗದ ಜನರು ಸೇರುವ ಸಾರ್ವಜನಿಕ ಸ್ಥಳ, ಜನನಿಬಿಡ ಪ್ರದೇಶಗಳಲ್ಲಿ ನಡೆಸಬೇಕು. ತಾಲ್ಲೂಕು ಮಟ್ಟದ ಅಧಿಕಾರಿಗಳು ತಪ್ಪದೇ ಜಾಗೃತಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ 62,252 ಪರಿಶಿಷ್ಟ ಜಾತಿ ಮಕ್ಕಳು ಹಾಗೂ 49,441 ಪರಿಶಿಷ್ಟ ಪಂಗಡದ ಮಕ್ಕಳು 1 ರಿಂದ 10 ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿದ್ದಾರೆ. ಬಹಳಷ್ಟುವಿದ್ಯಾರ್ಥಿಗಳುವಿದ್ಯಾರ್ಥಿವೇತನ ಮಂಜೂರಿಗೆ ಅರ್ಜಿ ಸಲ್ಲಿಸಿಲ್ಲ ಎಂಬುದು ಅತ್ಯಂತ ಗಂಭೀರ ವಿಷಯವಾಗಿದೆ. ಶಿಕ್ಷಣ ಇಲಾಖೆಯಿಂದ ಜಿಲ್ಲೆಯಾದ್ಯಂತ ಆಂದೋಲನ ಮಾದರಿಯಲ್ಲಿ ವಿದ್ಯಾರ್ಥಿಗಳಿಂದ ಅರ್ಜಿ ಹಾಕಿಸಬೇಕು. ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಯ ಮುಖ್ಯೋಪಾಧ್ಯಾಯರಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಬೇಕು. ಓರ್ವ ಅರ್ಹ ಫಲಾನುಭವಿ ವಿದ್ಯಾರ್ಥಿ ವೇತನ ಪಡೆಯುವುದರಿಂದ ವಂಚಿತರಾದರೆ ಸಂಬಂಧ ಪಟ್ಟವರನ್ನು ನೇರವಾಗಿ ಹೊಣೆ ಮಾಡಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದರು.

**ಅನುದಾನ ಕೈ ತಪ್ಪಿದರೆ ಕ್ರಮ** : ಸರ್ಕಾರವು ಪರಿಶಿಷ್ಟ ಜಾತಿ ಹಾಗೂ ಪಂಗಡದ ಕಲ್ಯಾಣಕ್ಕೆ ಮೀಸಲಿರಿಸಿದ ಹಣವು ಸದ್ಬಳಕೆಯಾಗಬೇಕು. ಕಾಮಗಾರಿಗಳು ನಿಗದಿತ ಸಮಯದಲ್ಲಿ ಪೂರ್ಣಗೊಳ್ಳಬೇಕು. ಅನುದಾನ ಕೈ ತಪ್ಪಿದರೆ ಅಧಿಕಾರಿಗಳೇ ನೇರ ಹೊಣೆ ಹೊರಬೇಕಾಗುತ್ತದೆ. ಹೀಗಾಗಿ ಅಂತಹ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತೇನೆ ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಎಚ್ಚರಿಕೆ ನೀಡಿದರು.

ನಾಯಕನಹಟ್ಟಿ ಭಾಗದಲ್ಲಿ ಅಡಿಕೆ ಹಾಗೂ ಕೃಷಿ ಕಾರ್ಮಿಕರಾಗಿ ಚಿಕ್ಕಮಕ್ಕಳು ಕಾರ್ಯನಿರ್ವಹಿಸುತ್ತಿರುವ ಕುರಿತು ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರು ಸಭೆಯಲ್ಲಿ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು. ಇದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಚಿತ್ರದುರ್ಗ ಜಿಲ್ಲೆಯಲ್ಲಿ ಬಾಲಕಾರ್ಮಿಕ ಹಾಗೂ ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಕಾರ್ಮಿಕ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟದ ಅಧಿಕಾರಿಗಳು ಸ್ವಯಂ ಪ್ರೇರಣೆಯಿಂದ ಕಾರ್ಯ ನಿರ್ವಹಿಸಿ, ಬಾಲ ಕಾರ್ಮಿಕ ಹಾಗೂ ಬಾಲ್ಯ ವಿವಾಹಗಳನ್ನು ತಡೆಗಟ್ಟಬೇಕು. ನೇರವಾಗಿ ದೂರು ಕೇಳಿ ಬಂದ ಕಡೆ ಜಿಲ್ಲಾಧಿಕಾರಿಗಳ ನೇತೃತ್ವದ ತಂಡ ನೇರವಾಗಿ ದಾಳಿ ನಡೆಸಿ, ಬಾಲ ಕಾರ್ಮಿಕರನ್ನು ಪತ್ತೆಹಚ್ಚಿದರೆ, ಯಾವುದೇ ಮುಲಾಜಿಗೂ ಒಳಗಾಗದೆ, ಸಂಬಂಧಪಟ್ಟ ಪ್ರದೇಶದ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ಅನುಮಾತು ಮಾಡುವುದಾಗಿ ಎಚ್ಚರಿಸಿದರು.

ಕಾರ್ಮಿಕ ಹಾಗೂ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ವತಿಯಿಂದ ಮಾಹಿತಿ ಶಿಕ್ಷಣ ಹಾಗೂ ಸಂವಹನ(ಐ.ಇ.ಸಿ) ಕಾರ್ಯಕ್ರಮದ ಅಡಿಯಲ್ಲಿ ವಿಶೇಷ ಜಾಗೃತಿ ವಿಡಿಯೋ ತುಣಕುಗಳನ್ನು ತಯಾರಿಸಿ ಎಲ್ಲಾ ಶಾಲೆಗಳಲ್ಲಿ ಪ್ರದರ್ಶಿಸಬೇಕು. ಈಗಾಗಲೇ ಮಕ್ಕಳ ಸಹಾಯವಾಣಿ 1098 ಕುರಿತು ಶಾಲೆಗಳ ಆವರಣದಲ್ಲಿ ಫಲಕಗಳನ್ನು ಬರೆಯುವ ಕಾರ್ಯ ನಡೆಯುತ್ತಿದೆ. ಶೀಘ್ರವಾಗಿ ಕಾರ್ಯ ಪೂರ್ಣಗೊಳ್ಳುವಂತೆ ಅಧಿಕಾರಿಗಳು ಮೇಲ್ವಚಾರಣೆ ನಡೆಸಬೇಕು ಎಂದರು.

**ಪೊಲೀಸ್ ಠಾಣೆಗಳಲ್ಲಿ ದೌರ್ಜನ್ಯ ತಡೆ ಸಭೆ** : ಪೊಲೀಸ್ ಇಲಾಖೆಯಿಂದ ಜಿಲ್ಲಾ ಮಟ್ಟದಲ್ಲಿ ಈಗಾಗಲೇ ದೌರ್ಜನ್ಯ ತಡೆ ಸಭೆಯನ್ನು ನಡೆಸಲಾಗಿದೆ. ಈ ಸಭೆಯ ಆಯೋಜನೆಯ ಕುರಿತು ಮುಂಚಿತವಾಗಿ ಪ್ರತಿಕೆಗಳಲ್ಲಿ ಪ್ರಕಟಣೆ ನೀಡಿ, ಸಾರ್ವಜನಿಕರನ್ನು ಸಭೆ ಆಹ್ವಾನಿಸಲಾಗಿತ್ತು. ಇದೇ ಮಾದರಿಯಲ್ಲಿ ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆಗಳಲ್ಲಿಯೂ ದೌರ್ಜನ್ಯ ತಡೆ ಸಭೆ ನಡೆಸಲು ಸೂಚನೆ ನೀಡಲಾಗಿದೆ. ಸಭೆಯ ಕುರಿತು ಪತ್ರಿಕೆ ಪ್ರಕಟಣೆ ನೀಡುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಸಭೆಯಲ್ಲಿ ಸ್ಪಷ್ಟಪಡಿಸಿದರು.

ಸಮಾಜ ಕಲ್ಯಾಣ ಇಲಾಖೆ ಜಾಗೃತಿ ಕಾರ್ಯಕ್ರಮಗಳಲ್ಲಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹಂತದ ಅಧಿಕಾರಿ ಪಾಲ್ಗೊಳ್ಳಲು ನಿರ್ದೇಶನ ನೀಡಲಾಗುವುದು. ದೌರ್ಜನ್ಯ ಪ್ರಕರಣಗಳಲ್ಲಿ ಸಂತ್ರಸ್ಥರಿಗೆ ಪ್ರಕರಣ ಹಿಂಪಡೆಯುವಂತೆ ಅಥವಾ ರಾಜಿಗೆ ಒಳಗಾಗುವಂತೆ ಯಾವುದೇ ಪೊಲೀಸ್ ಸಿಬ್ಬಂದಿ ಒತ್ತಡ ಹೇರುವುದು ಕಂಡುಬಂದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಇಂತಹ ಪ್ರಕರಣ ಕಂಡುಬಂದರೆ ಜಾಗೃತಿ ಸಮಿತಿ ಸದಸ್ಯರು ನೇರವಾಗಿ ಸಂಪರ್ಕಿಸುವಂತೆ ಹೇಳಿದರು.

ಜಿಲ್ಲೆಯಾದ್ಯಂತ ಈ ವರ್ಷ 24 ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಮುಂದಿನ ಫೆಬ್ರವರಿ ವರೆಗೂ ಕಾರ್ಯಕ್ರಮಗಳ ಪಟ್ಟಿ ಸಿದ್ದವಿದೆ. ಕಳೆದ ನಾಲ್ಕು ತಿಂಗಳ ಅವಧಿಯಲ್ಲಿ ಜಿಲ್ಲೆಯಲ್ಲಿ ಒಟ್ಟು 23 ದೌರ್ಜನ್ಯ ಪ್ರಕರಣಗಳು ದಾಖಲಾಗಿವೆ. ಇದೇ ಅವಧಿಯಲ್ಲಿ 01 ಪೋಕ್ಸೋ ಪ್ರಕರಣದಲ್ಲಿ 50 ಸಾವಿರ ರೂ., 22 ಜಾತಿ ನಿಂದನೆ ಪ್ರಕರಣದಲ್ಲಿ ಸಂತ್ರಸ್ತರಿಗೆ ಒಟ್ಟು 49 ಲಕ್ಷ ರೂ. ಪರಿಹಾರ ನೀಡಲಾಗಿದೆ. ನವೆಂಬರ್ ಅಂತ್ಯಕ್ಕೆ ಜಿಲ್ಲಾ ನ್ಯಾಯಾಲಯದಲ್ಲಿ 88 ದೌರ್ಜನ್ಯ ಪ್ರಕರಣಗಳು ಬಾಕಿಯಿದ್ದು, ಒಂದು ಪ್ರಕರಣದಲ್ಲಿ ಆರೋಪಿಗಳು ಬಿಡುಗಡೆಯಾಗಿದ್ದಾರೆ. ಯಾವುದೇ ಪ್ರಕರಣದಲ್ಲಿ ಶಿಕ್ಷೆಯಾಗಿಲ್ಲ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸದಸ್ಯರಾದ ಡಿ.ಓ.ಮೊರಾರ್ಜಿ, ಓ.ಚಿನ್ನಪ್ಪ, ಬೋರಸ್ವಾಮಿ, ರಂಗಸ್ವಾಮಿ, ಜಿ.ಪಂ. ಯೋಜನಾ ನಿರ್ದೇಶಕ ಡಾ.ರಂಗಸ್ವಾಮಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಪರಮೇಶ್ವರಪ್ಪ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಆರ್.ಬಣಕಾರ್, 2ನೇ ಜಿಲ್ಲಾ ಸತ್ರ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕಿ ನಾಗವೇಣಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿದ್ಯಾರ್ಥಿ ಟಿ.ಮಾರಣ್ಣ ಸಮುದಾಯಕ್ಕೆ ಮಾದರಿ: ತಿಪ್ಪೇಸ್ವಾಮಿ

» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಕೊರ್ಲಕುಂಟೆ ಗ್ರಾಮದ ದಲಿತ ವಿದ್ಯಾರ್ಥಿ ಟಿ.ಮಾರಣ್ಣ ತನ್ನ ಕಡುಬಡತನದಲ್ಲೂ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿ ಬಂಧುಗಳು ಹಾಗೂ ಸ್ನೇಹಿತ ಸಹಕಾರದಿಂದ ಥೈಲ್ಯಾಂಡ್ ದೇಶಕ್ಕೆ ತೆರಳಿ ಪಿಎಚ್‌ಡಿ ಅಧ್ಯಯನ ಮಾಡುತ್ತಿದ್ದು, ಚಳ್ಳಕೆರೆಗೆ ಆಗಮಿಸಿದ ಅವರನ್ನು ಕೊರ್ಲಕುಂಟೆ ಸಾಂಸ್ಕೃತಿಕ ಸಂಘದ ವತಿಯಿಂದ ನಗರದ ಪ್ರವಾಸಿಮಂದಿರದಲ್ಲಿ ಗೌರವಿಸಲಾಯಿತು.



ಸಮಿತಿ ಅಧ್ಯಕ್ಷ, ಪತ್ರಕರ್ತ ಕೊರ್ಲಕುಂಟೆ ತಿಪ್ಪೇಸ್ವಾಮಿ ಮಾತನಾಡಿ, ಶೈಕ್ಷಣಿಕ ಸಾಧನೆಗೆ ಯಾವುದೇ ಅಡ್ಡಿಯಾಗದು ಎಂಬುವುದಕ್ಕೆ ಟಿ.ಮಾರಣ್ಣ ಸಾಕ್ಷಿಯಾಗಿದ್ದಾರೆ. ಬಾಲ್ಯದಿಂದಲೂ ವ್ಯಾಸಂಗದ ಕಡೆ ಹೆಚ್ಚು ಒತ್ತು ನೀಡುತ್ತಿದ್ದ ಮಾರಣ್ಣ ಎಸ್‌ಎಸ್‌ಎಲ್‌ಸಿ, ಪಿಯುಸಿ ನಂತರ ಇನ್ನೂ ಹೆಚ್ಚಿನ ಸಾಧನೆಗಾಗಿ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ. ವಿಶೇಷವಾಗಿ ಮಾದಿಗ ಸಮುದಾಯದ ವಿದ್ಯಾರ್ಥಿಗಳು ಉನ್ನತ ಶಿಕ್ಷಣವನ್ನು ಪಡೆಯುವ ಕನಸನ್ನು ಕಾಣುವುದೇ ಕಷ್ಟವಾದಾಗ ಈ ವಿದ್ಯಾರ್ಥಿ ಎಲ್ಲವನ್ನೂ ಮೆಟ್ಟಿನಿಂತು ದೂರದ ಥೈಲ್ಯಾಂಡ್‌ನಲ್ಲಿ ಪಿಎಚ್‌ಡಿ ಅಧ್ಯಯನ ಮಾಡುವ ಮೂಲಕ ಎಲ್ಲರಿಗೂ ಮಾದರಿಯಾಗಿದ್ದಾನೆಂದರು.

## ಅಪಘಾತ: ಸಚಿವ ಮಧು ಪಾರು

» **ತುಮಕೂರು**

ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಪ್ರಯಾಣಿಸುತ್ತಿದ್ದ ಕಾರು



ಅಪಘಾತಕ್ಕೀಡಾಗಿದ್ದು, ಸಚಿವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ತುಮಕೂರಿನ ನಂದಿಹಳ್ಳಿಯ ಹತ್ತಿರ ಹೆದ್ದಾರಿಯಲ್ಲಿ ಬುಧವಾರ ತಡರಾತ್ರಿ ಈ ಅಪಘಾತವಾಗಿದೆ. ಚಲಿಸುತ್ತಿದ್ದ ಲಾರಿಗೆ ಕಾರು ಹಿಂಭಾಗದಿಂದ ಗುದ್ದಿದ್ದು, ಪರಿಣಾಮ ಕಾರಿನ ಮುಂಭಾಗ ಸಂಪೂರ್ಣ ಜಖಂ ಆಗಿದೆ. ಕಾರಿನಲ್ಲಿ ಸಚಿವರು ಸೇರಿ ಮೂವರು ಪ್ರಯಾಣಿಸುತ್ತಿದ್ದು, ಎಲ್ಲರೂ ಪ್ರಾಣಾಪಾಯದಿಂದ ಪಾರಗಿದ್ದಾರೆ. ಶಿವಮೊಗ್ಗದಿಂದ ಬೆಂಗಳೂರಿಗೆ ಪ್ರಯಾಣಿಸುತ್ತಿದ್ದಾಗ ಮಾರ್ಗ ಮಧ್ಯೆ ಈ ದುರಂತ ಸಂಭವಿಸಿದ್ದು ಬದಲಿ ವಾಹನ ವ್ಯವಸ್ಥೆ ಮಾಡಿಕೊಂಡು ಸಚಿವರು ಬೆಂಗಳೂರಿಗೆ ತೆರಳಿದ್ದಾರೆ, ಎನ್ನಲಾಗಿದೆ.

## ಪ್ರಮುಖ ಸುದ್ದಿ

### 15 ದಿನದ ಒಳಗೆ ಅನುದಾನ ಬಳಕೆಗೆ ಕ್ರಿಯಾ ಯೋಜನೆ ಸಿದ್ಧಪಡಿಸಿ: ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ

# ಮಾದರಿ ನೀತಿ ಸಂಹಿತೆ ಪೂರ್ವದಲ್ಲಿಯೇ ಪ್ರಗತಿ ಸಾಧಿಸಿ

» **ಚಿತ್ರದುರ್ಗ**

ಲೋಕಸಭಾ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಗೆ ಬರುವ ಪೂರ್ವದಲ್ಲಿಯೇ ಎಲ್ಲಾ ಇಲಾಖೆಗಳ ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ ಅನುದಾನಗಳ ಬಳಕೆ ಮಾಡಿ ಸಂಪೂರ್ಣ ಪ್ರಗತಿ ಸಾಧಿಸಬೇಕು. ಬಿಡುಗಡೆಯಾಗಿರುವ ಅನುದಾನದ ಬಳಕೆಗೆ 15 ದಿನದ ಒಳಗಾಗಿ ಕ್ರಿಯಾ ಯೋಜನೆ ಸಿದ್ದಪಡಿಸಿ ಅನುಮತಿ ಪಡೆಯುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಗುರುವಾರ ಜರುಗಿದ 2023-24ನೇ ಸಾಲಿನ ನವೆಂಬರ್-2023 ಮಾಹೆಯ ಅಂತ್ಯದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗಗಳ ಉಪಯೋಜನೆ (ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ) ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಅವರು ಮಾತನಾಡಿದರು.

ಎಲ್ಲಾ ಇಲಾಖೆಗಳು ಫೆಬ್ರವರಿ ಅಂತ್ಯದ ವೇಳೆ ಶೇ.100 ರಷ್ಟು ಆರ್ಥಿಕ ಪ್ರಗತಿ ಸಾಧಿಸಬೇಕು. ಲೋಕಸಭಾ, ವಿಧಾನ ಪರಿಷತ್ ಹಾಗೂ ಪಂಚಾಯತಿ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಯಾದ ನಂತರ ಹೊಸ ಯೋಜನೆಗಳಿಗೆ ಅನುಮೋದನೆ ನೀಡುವುದು ಸಾಧ್ಯವಾಗುವುದಿಲ್ಲ. ಹೀಗಾಗಿ ಚುನಾವಣೆಯ ಮಾದರಿ ನೀತಿ ಸಂಹಿತೆ ಜಾರಿಗೆ ಬರುವ ಪೂರ್ವದಲ್ಲಿಯೇ ಎಲ್ಲಾ ಇಲಾಖೆಗಳ ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ ಅನುದಾನಗಳ ಬಳಕೆ ಮಾಡಿ ಸಂಪೂರ್ಣ ಪ್ರಗತಿ ಸಾಧಿಸಬೇಕು. ಎಂದರು.

ವಿದ್ಯಾರ್ಥಿ ನಿಲಯಗಳ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಅನುದಾನ ಬಳಕೆ ಮಾಡಿ : ಜಿಲ್ಲೆಯ ಎಲ್ಲಾ ವಿದ್ಯಾರ್ಥಿ ನಿಲಯಗಳ ಕುಡಿಯುವ ನೀರು, ಸೋಲಾರ್ ವಾಟರ್ ಹೀಟರ್ ಸೇರಿದಂತೆ ಇತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಅಳವಡಿಕೆಗೆ ಎಸ್.ಸಿ.ಪಿ ಹಾಗೂ ಟಿ.ಎಸ್.ಪಿ ಅನುದಾನ ಬಳಕೆಗೆ ಆದ್ಯತೆ ನೀಡಬೇಕು. ಎಲ್ಲಾ ನಗರ, ಪಟ್ಟಣ ಹಾಗೂ ಗ್ರಾಮ ಪಂಚಾಯಿತಿಗಳಿಂದ ವಿದ್ಯಾರ್ಥಿಗಳ ನಿಲಯಗಳಿಗೆ ನೀರಿನ ಸಂಪರ್ಕ ಒದಗಿಸಲು ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಹೇಳಿದರು.

ತಿಂಗಳ ಅಂತ್ಯದ ವೇಳೆಗೆ ವಸತಿ ಯೋಜನೆಗಳ ಫಲಾನುಭವಿಗಳನ್ನು ಗುರುತಿಸಿ ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಪಟ್ಟಿಯನ್ನು ಕಳುಹಿಸಿಕೊಡಬೇಕು. ವಿವಿಧ ನಿಗಮಗಳಡಿ ನೀಡಲಾಗುವ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಶಾಸಕರ ನೇತೃತ್ವದಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಎಲ್ಲಾ ಇಲಾಖೆ ಹಾಗೂ ನಿಗಮಗಳ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ಜಿಲ್ಲೆಯ ಎಲ್ಲಾ ಇಲಾಖೆ ಹಾಗೂ ಅಭಿವೃದ್ಧಿ ನಿಗಮಗಳಿಂದ ಎಸ್.ಸಿ.ಪಿ ಯೋಜನೆಯಡಿ ರೂ. 144.15 ಕೋಟಿ ಹಾಗೂ ಟಿಎಸ್‌ಪಿ ಯೋಜನೆಯಡಿ ರೂ.102.78 ಕೋಟಿ ಅನುದಾನ ಖರ್ಚು ಮಾಡಿ ಒಟ್ಟು ಶೇ.92 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸಭೆಯಲ್ಲಿ ಮಾಹಿತಿ ನೀಡಿದರು. ಇದೇ ಸಂದರ್ಭದಲ್ಲಿ ಒಟ್ಟು 37 ಅನುಷ್ಠಾನ ಇಲಾಖೆಗಳ ಪ್ರಗತಿ ಪರಿಶೀಲನೆಯನ್ನು ಜಿಲ್ಲಾಧಿಕಾರಿಗಳ ನಡೆಸಿದರು.

ಸಭೆಯಲ್ಲಿ ಜಿ.ಪಂ.ಯೋಜನಾ ನಿರ್ದೇಶಕ ಡಾ.ರಂಗಸ್ವಾಮಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಆರ್.ಬಣಕಾರ್, ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಪರಮೇಶ್ವರಪ್ಪ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T